ಸಂಪುಟ 01 | ಸಂಚಿಕೆ 167 ಶುಕ್ರವಾರ 21 ಆಗಸ್ಟ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ
REGIONAL KANNADA DAILY MORNING

ಸಿಂಧನೂರು, ಮಸ್ಕಿ ಮಾನ್ವಿ, ಅಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ವಿಶ್ವ ಹಿರಿಯ ನಾಗರಿಕರ ದಿನ

ವಿಶ್ವ ಹಿರಿಯ ನಾಗರಿಕರ ದಿನವನ್ನು ಪ್ರತಿ ವರ್ಷ ಆಗಸ್ಟ್ 21ರಂದು ಆಚರಿಸಲಾಗುತ್ತದೆ. ಹಿರಿಯ ನಾಗರಿಕರ ಜ್ಞಾನ, ಅನುಭವ, ಸಮಾಜಕ್ಕೆ ಅವರು ನೀಡಿದ ಕೊಡುಗೆ ಮತ್ತು ಅವರ ಮಹತ್ವವನ್ನು ಗೌರವಿಸುವುದು ಈ ದಿನದ ಉದ್ದೇಶವಾಗಿದೆ.

2) ಭಯೋತ್ಪಾದನೆಯ ಸಂತ್ರಸ್ತರ ಸ್ಮರಣೆ ಮತ್ತು ಗೌರವದ ಅಂತರರಾಷ್ಟ್ರೀಯ ದಿನ

ಭಯೋತ್ಪಾದನೆಯಿಂದ ಜೀವ ಕಳೆದುಕೊಂಡವರು, ಗಾಯಗೊಂಡವರು ಹಾಗೂ ಬದುಕುಳಿದ ಸಂತ್ರಸ್ತರನ್ನು ಸ್ಮರಿಸಿ ಅವರಿಗೆ ಗೌರವ ಸಲ್ಲಿಸುವ ಉದ್ದೇಶದಿಂದ ಪ್ರತಿವರ್ಷ ಆಗಸ್ಟ್ 21ರಂದು ಈ ದಿನವನ್ನು ಆಚರಿಸಲಾಗುತ್ತದೆ.

## ಸುಭಾಷಿತ

ಇತರರನ್ನು ನೀವು ದೂಷಿಸುವಂತೆ
ನಿಮ್ಮನ್ನೂ ನೀವು ದೂಷಿಸಿಕೊಳ್ಳಬೇಕು.
ನಿಮ್ಮನ್ನು ನೀವು ಕ್ಷಮಿಸಿಕೊಳ್ಳುವಂತೆ
ಇತರರನ್ನೂ ಕ್ಷಮಿಸಬೇಕು.

–ಪಾಟೀಲ ಪುಟ್ಟಪ್ಪ

## ಹಸಿರು ಅಭಿಯಾನ

❏ ನೈಜ್ಯ ದೆಸೆ ನ್ಯೂಸ್

ಇಂದು ಸಂಕಲ್ಪ ಫೌಂಡೇಶನ್ ವತಿಯಿಂದ ಕರ್ಚೇಡು ಗ್ರಾಮದ ರಸ್ತೆ ಬದಿಯಲ್ಲಿ ಸಸಿ ನೆಡುವ ಕಾರ್ಯಕ್ರಮವನ್ನು ಯಶಸ್ವಿಯಾಗಿ ನೆರವೇರಿಸಲಾಯಿತು.



ಪರಿಸರ ಕಾಳಜಿಯ ಈ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಭಾಗವಹಿಸಿದ ದಸ್ತಗಿರಿ ಸಾಹೇಬ್, ಕೃಷ್ಣ, ಯ-ರ್‍ರಿಸ್ವಾಮಿ, ಶಂಕರ್ ಕೆ., ಜನಾರ್ದನ ಗೌಡ, ಶಿವನ ಕುಮಾರ್, ಮಹಾಂತೇಶ್, ಲಿಂಗಮೂರ್ತಿ ಹಾಗೂ ಉಪಸ್ಥಿತರಿದ್ದರು. ನಾವು ನೆಟ್ಟ ಸಸಿಗಳನ್ನು ನೀರು ಹಾಕಿ ಪೋಷಿಸಿ, ಮರಗಳನ್ನಾಗಿ ಬೆಳೆಸಲು ನಾವೆಲ್ಲರೂ ಬದ್ಧರಾಗಿರೋಣ.

# ದಕ್ಷಿಣಕ್ಕೆ ನ್ಯಾಯಯುತ ಪಾಲಿಗೆ ಡಿಕೆಶಿ ಆಗ್ರಹ

❏ ನೈಜ್ಯ ದೆಸೆ ನ್ಯೂಸ್

ಮಹಾಬಲಿಪುರಂ : "ಕರ್ನಾಟಕ ಬಲಿಷ್ಠವಾದಾಗ, ದಕ್ಷಿಣ ಭಾರತ ಮತ್ತಷ್ಟು ಬಲಿಷ್ಠವಾಗುತ್ತದೆ. ದಕ್ಷಿಣ ಭಾರತ ಬಲಿಷ್ಠವಾದಾಗ, ಭಾರತ ಮತ್ತಷ್ಟು ಬಲಿಷ್ಠವಾಗುತ್ತದೆ. ನಾವು ಭಾರತದ ಅಭಿವೃದ್ಧಿಯ ಪಾಲುದಾರರು. ನಮಗೆ ನಮ್ಮ ನಿಧಿಗಳಲ್ಲಿ, ನಮ್ಮ ಧ್ವನಿಯಲ್ಲಿ ನ್ಯಾಯ ಬೇಕು. ನಮಗೆ ನ್ಯಾಯಯುತವಾಗಿ ಅನುದಾನ ನೀಡಿ. ದಕ್ಷಿಣ ಭಾರತಕ್ಕೆ ಸಲ್ಲಬೇಕಾದ ನ್ಯಾಯಯುತ ಪಾಲನ್ನು ನೀಡಿ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ಒತ್ತಾಯಿಸಿದರು.

ತಮಿಳುನಾಡಿನ ಮಹಾಬಲಿಪುರಂನಲ್ಲಿ ಇಂದು ನಡೆದ 31ನೇ ದಕ್ಷಿಣ ವಲಯ ಮಂಡಳಿ ಸಭೆಯಲ್ಲಿ ಶಿವಕುಮಾರ್ ಅವರು ಮಾತನಾಡಿದರು. "ಮುಂದಿನ ಚರ್ಚೆಯ ಸಂದರ್ಭದಲ್ಲಿ ಈ ಪ್ರತಿಯೊಂದು ವಿಷಯದ ಕುರಿತಾದ ನಿರ್ದಿಷ್ಟ ಸಮಸ್ಯೆಗಳು, ಸಂಬಂಧಿತ ಅಂಕಿ-ಅಂಶಗಳು ಹಾಗೂ ಕರ್ನಾಟಕ ಪ್ರಸ್ತಾಪಿಸುವ ಪರಿಹಾರ ಕ್ರಮಗಳನ್ನು ಈ ಮಂಡಳಿಯ ಮುಂದೆ ಮಂಡಿಸುತ್ತೇನೆ." ಕರ್ನಾಟಕ ಇಲ್ಲಿ ದೂರು ನೀಡಲು ಬಂದಿಲ್ಲ. ಆರ್ಥಿಕತೆಯನ್ನು ಮುನ್ನಡೆಸುತ್ತಿರುವ ರಾಜ್ಯಗಳಿಗೆ ಸಲ್ಲಬೇಕಾದ ಗೌರವ, ನ್ಯಾಯಯುತ ಅಂಶಗಳನ್ನು ತಿಳಿಸಲು ಬಂದಿದ್ದೇವೆ. ನಮ್ಮೊಂದಿಗೆ ಹೆಜ್ಜೆ ಹಾಕಿ. ನಾವು ಭಾರತದ ಭವಿಷ್ಯ ಬೆಳಗುವ ಅವಕಾಶಗಳನ್ನು ಮುಂದುವರೆಸಿಕೊಂಡು ಹೋಗುತ್ತೇವೆ " ಎಂದರು.




ಕರ್ನಾಟಕ, ದಕ್ಷಿಣ ಭಾರತದ ಮೂಲಕ ಭಾರತದ ಅಭಿವೃದ್ಧಿ ಪಯಣ "ನಾನು ಹೆಮ್ಮೆಯ ಭಾರತೀಯನಾಗಿ ಹಾಗೂ 16 ಶತಮಾನಗಳಿಗೂ ಹೆಚ್ಚಿನ ಇತಿಹಾಸವನ್ನು ಹೊಂದಿರುವ ನಮ್ಮ ಕನ್ನಡ ಭಾಷೆ ಮತ್ತು ಸಂಸ್ಕೃತಿಯ ಹೆಮ್ಮೆಯ ಕನ್ನಡಿಗನಾಗಿ ಮಾತನಾಡುತ್ತಿದ್ದೇನೆ. ನಾನು ಕರ್ನಾಟಕದ ಪರವಾಗಿ ಮಾತ್ರವಲ್ಲ, ಇಡೀ ದಕ್ಷಿಣ ಭಾರತದ ಪರವಾಗಿ ಮಾತನಾಡುತ್ತಿದ್ದೇನೆ. ಭಾರತದ ಅಭಿವೃದ್ಧಿಯ ಪಯಣವು ದಕ್ಷಿಣ ಭಾರತದ ಮೂಲಕ ಸಾಗುತ್ತದೆ.

ಭಾರತದ ಅಭಿವೃದ್ಧಿಯ ತೇರು ದಕ್ಷಿಣ ಭಾರತ ಮೂಲಕವೇ ಸಾಗುತ್ತಿತ್ತು, ಸಾಗುತ್ತಿದೆ, ಸಾಗುತ್ತದೆ" ಎಂದರು. "ನಮ್ಮ ಐದು ರಾಜ್ಯಗಳು ಭಾರತದ ಒಟ್ಟು ಜನಸಂಖ್ಯೆಯ ಸುಮಾರು ಶೇ.20ರಷ್ಟನ್ನು ಹೊಂದಿದ್ದರೂ, ದೇಶದ ಒಟ್ಟು ಜಿಡಿಪಿಗೆ ಸುಮಾರು ಶೇ.33ರಷ್ಟು ಕೊಡುಗೆ ನೀಡುತ್ತಿವೆ. ಅಂದರೆ, ಭಾರತದ ಆರ್ಥಿಕತೆಯಲ್ಲಿ ಉತ್ಪತ್ತಿಯಾಗುವ ಪ್ರತಿ ಮೂರು ರೂಪಾಯಿಗಳಲ್ಲಿ ಒಂದು ರೂಪಾಯಿ ದಕ್ಷಿಣ ಭಾರತದಿಂದ ಬರುತ್ತದೆ. ಭಾರತದ ಆರ್ಥಿಕತೆಯ ಈ ಪ್ರಮುಖ ಎಂಜಿನ್‌ನಲ್ಲಿ ಕರ್ನಾಟಕವು ಅತ್ಯಂತ ಬಲಿಷ್ಠ ಚಾಲಕ ಶಕ್ತಿಗಳಲ್ಲಿ ಒಂದಾಗಿದೆ" ಎಂದು ಪುನಃರುಚ್ಚರಿಸಿದರು.

"ಸಾಫ್ಟ್‌ವೇರ್ ರಫ್ತಿನಲ್ಲಿ ನಾವು ದೇಶದಲ್ಲೇ ಪ್ರಥಮ ಸ್ಥಾನದಲ್ಲಿದ್ದೇವೆ. ಭಾರತದ ಸಾಫ್ಟ್‌ವೇರ್ ರಫ್ತಿನಲ್ಲಿ ಕರ್ನಾಟಕದ ಕೊಡುಗೆ ಶೇ.42ರಷ್ಟಿದೆ. ಸುಮಾರು 1,100 ಗ್ಲೋಬಲ್ ಕೇಪಬಲಿಟಿ ಸೆಂಟರ್‌ಗಳನ್ನು (ಜಿಸಿಸಿ) ಹೊಂದಿರುವ ನಾವು, ದೇಶದಲ್ಲೇ ಅತಿ ಹೆಚ್ಚು ಜಿಸಿಸಿಗಳನ್ನು ಹೊಂದಿರುವ ರಾಜ್ಯವಾಗಿದ್ದೇವೆ. 2019ರಿಂದ 2025ರ ಅವಧಿಯಲ್ಲಿ ಭಾರತದ ಒಟ್ಟು ವಿದೇಶಿ ನೇರ ಬಂಡವಾಳ (ಎಫ್‌ಡಿಐ) ಈಕ್ವಿಟಿ ಒಳಹ-ರಿವಿನಲ್ಲಿ ಶೇ.21ಕ್ಕಿಂತ ಹೆಚ್ಚಿನ ಪಾಲನ್ನು ಕರ್ನಾಟಕ ಆಕರ್ಷಿಸಿದೆ" ಎಂದು ವಿವರಿಸಿದರು.

"ಭಾರತದ ಜನಸಂಖ್ಯೆಯಲ್ಲಿ ಕರ್ನಾಟಕದ ಪಾಲು ಕೇವಲ ಶೇ.5.5ರಷ್ಟಿದ್ದರೂ, ದೇಶದ ಜಿಡಿಪಿಗೆ ನಮ್ಮ ಕೊಡುಗೆ ಶೇ.9ರಷ್ಟಿದೆ. ಕರ್ನಾಟಕದ ತಲಾ ಆದಾಯ ದೇಶದಲ್ಲೇ ಅತ್ಯಧಿಕವಾಗಿದ್ದು, ಭಾರತದ ತಲಾ ಆದಾಯಕಿಂ-ತ ಸುಮಾರು ಎರಡು ಪಟ್ಟು ಹೆಚ್ಚಾಗಿದೆ. ದೇಶದ ಏರೋಸ್ಪೇಸ್ ಉದ್ಯಮದ ಶೇ.60ರಷ್ಟು ಭಾಗ ಕರ್ನಾಟಕದಲ್ಲಿದೆ. ಭಾರತದ ಕಾಫಿ ಉತ್ಪಾದನೆಯ ಸುಮಾರು ಶೇ 70 ಮತ್ತು ಸಂಸ್ಕರಿಸಿದ ಸೌತೆಕಾಯಿ ರಫ್ತಿನ ಶೇ.90 ಕೊಡುಗೆ ನಮ್ಮದಾಗಿದೆ. ಬೆಂಗಳೂರು ಇಂದು ಕ್ಯಾಲಿಫೋರ್ನಿಯಾದ ಸಿಲಿಕಾನ್ ವ್ಯಾಲಿ, ನ್ಯೂಯಾರ್ಕ್, ಬೀಜಿಂಗ್ ಮತ್ತು ಲಂಡನ್‌ಗಳೊಂದಿಗೆ ವಿಶ್ವದ ಪ್ರಮುಖ ಐದು ಎಐ ನಗರಗಳಲ್ಲಿ 3ನೇ ಪುಟಕ್ಕೆ

# ಮ್ಯಾಕಲದೊಡ್ಡಿ ಶಾಲೆಗೆ ಎಸ್‌ಡಿಎಂಸಿ ರಚನೆಗೆ ಆಗ್ರಹ: ಬಿಇಒಗೆ ದಸಂಸ ಮನವಿ

❏ ನೈಜ್ಯ ದೆಸೆ ನ್ಯೂಸ್

ಜಾಲಹಳ್ಳಿ/ದೇವದುರ್ಗ: ತಾಲೂಕಿನ ಜಾಲಹಳ್ಳಿ ಶಿಕ್ಷಣ ವಲಯ ವ್ಯಾಪ್ತಿಯ ಮ್ಯಾಕಲದೊಡ್ಡಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ನಿಯೋಜನೆಗೊಂಡಿರುವ ಮುಖ್ಯ ಶಿಕ್ಷಕರನ್ನು ಅದೇ ಶಾಲೆಯಲ್ಲಿ ಮುಂದುವರಿಸಬೇಕು ಹಾಗೂ ಶಾಲಾ ಅಭಿವೃದ್ಧಿ ಮತ್ತು ಮೇಲ್ವಿಚಾರಣಾ ಸಮಿತಿ (ಎಸ್‌ಡಿಎಂಸಿ)ಯನ್ನು ತಕ್ಷಣ ಪುನರ್ ರಚಿಸಬೇಕು ಎಂದು ಆಗ್ರಹಿಸಿ ಭಾರತ ದಲಿತ ಸಂಘರ್ಷ ಸಮಿತಿ (ರಾಜ್ಯ ಸಮಿತಿ) ಪದಾಧಿಕಾರಿಗಳು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಮ್ಯಾಕಲದೊಡ್ಡಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಖಾಲಿ ಮುಖ್ಯ ಶಿಕ್ಷಕರ ಹುದ್ದೆಗೆ ನೇಮಕಗೊಂಡು ಶಾಲೆಗೆ ಕರ್ತವ್ಯಕ್ಕೆ ಹಾಜರಾಗಿದ್ದ ಮುಖ್ಯ ಶಿಕ್ಷಕರನ್ನು ಬೇರೆ ಶಾಲೆಗೆ ತಾತ್ಕಾಲಿಕವಾಗಿ ವರ್ಗಾವಣೆ ಮಾಡಲಾಗಿದೆ. ಈ ತಾತ್ಕಾಲಿಕ ವರ್ಗಾವಣೆಯನ್ನು ಕೂಡಲೇ ರದ್ದುಗೊಳಿಸಿ, ಅವರನ್ನು ಮ್ಯಾಕಲದೊಡ್ಡಿ ಶಾಲೆಯಲ್ಲೇ ಮುಖ್ಯ ಶಿಕ್ಷಕರಾಗಿ ಮುಂದುವ-ರಿಸಲು ಆದೇಶಿಸಬೇಕು ಎಂದು ಸಂಘಟನೆಯ ಮುಖಂಡರು ಒತ್ತಾಯಿಸಿದರು.




ಶಾಲೆಯ ಪ್ರಸ್ತುತ ಎಸ್‌ಡಿಎಂಸಿ ಸಮಿತಿಯ ಅವಧಿ ಮುಕ್ತಾಯಗೊಂಡಿರುವುದ-ರಿಂದ, ಕೂಡಲೇ ಪಾಲಕರ ಸಭೆ ಕರೆದು ನಿಯಮಾನುಸಾರ ನೂತನ ಎಸ್‌ಡಿ-ಎಂಸಿ ಸಮಿತಿಯನ್ನು ರಚಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ. ಈ ಎರಡೂ ಬೇಡಿಕೆಗಳನ್ನು ಶೀಘ್ರ ಈಡೇ-ರಿಸದಿದ್ದರೆ ಶಿಕ್ಷಣ ಇಲಾಖೆಯ ಕಚೇರಿ ಮುಂದೆ ತೀವ್ರ ಪ್ರತಿಭಟನೆ ನಡೆಸಲಾಗುವುದು ಎಂದು ದಸಂಸ ಮುಖಂಡರು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ತಾಲೂಕು ಅಧ್ಯಕ್ಷ ಬಾಳಪ್ಪ ಭಾವಿಮನಿ, ಮುಖಂಡರಾದ ಬಾಬು ಅಕ್ಕರಕಿ, ಸಾಬಣ್ಣ ಕಮಲದಿನ್ನಿ, ಡಿ. ರಾಮಣ್ಣ, ಎಂ. ಶಾಂತಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಮಳೆ ಕೈಕೊಟ್ಟ ಹಿನ್ನೆಲೆಯಲ್ಲಿ ವರಮಹಾಲಕ್ಷ್ಮಿಗೂ ಬರ

❏ ನೈಜ್ಯ ದೆಸೆ ನ್ಯೂಸ್

ಕುಷ್ಟಗಿ: ಮಳೆ ಕೊರತೆಯಿಂದ ಕೃಷಿ ಚಟುವಟಿ-ಕೆಗಳು ಕುಂಠಿತಗೊಂಡಿರುವ ಪರಿಣಾಮ ಈ ಬಾರಿ ವರಮಹಾಲಕ್ಷ್ಮಿ ಹಬ್ಬದ ವ್ಯಾಪಾರಕ್ಕೂ ಬರದ ಬಿಸಿ ತಟ್ಟಿದೆ. ಕುಷ್ಟಗಿ ನಗರದ ವಿವಿಧೆಡೆ ಹಬ್ಬದ ಹಿನ್ನೆಲೆಯಲ್ಲಿ ಬಾಳೆಗಿಡಗಳ ವ್ಯಾಪಾರ ನಡೆಯುತ್ತಿದ್ದರೂ, ನಿರೀಕ್ಷಿತ ಪ್ರಮಾಣದಲ್ಲಿ ಗ್ರಾಹಕರು ಆಗಮಿಸದ ಕಾರಣ ಸಣ್ಣ ವ್ಯಾಪಾರಿಗಳು ಆತಂಕಕ್ಕೆ ಒಳಗಾಗಿದ್ದಾರೆ.

ನಗರದಲ್ಲಿ ಬಾಳೆಗಿಡಗಳ ವ್ಯಾಪಾರ ಮಾಡುತ್ತಿದ್ದ ದುರುಗವ್ವ ಭಜಂತ್ರಿ ವಣಗೇರಿ ಅವರು ಗ್ರಾಹಕರ ನಿರೀಕ್ಷೆಯಲ್ಲಿ ಕೈಕಟ್ಟಿ ಕುಳಿತಿರುವುದು ಕಂಡುಬಂತು. "ಪ್ರತಿ ವರ್ಷ ವರಮಹಾಲಕ್ಷ್ಮಿ ಹಬ್ಬದ ಸಂದರ್ಭದಲ್ಲಿ ಬಾಳೆಗಿಡಗಳಿಗೆ ಉತ್ತಮ ಬೇಡಿಕೆ ಇರುತ್ತದೆ. ಈ ವರ್ಷವೂ ವ್ಯಾಪಾರ ಚೆನ್ನಾಗಿ ಆಗುತ್ತದೆ ಎಂಬ ನಿರೀಕ್ಷೆಯಿಂದ ಸಾಕಷ್ಟು ದುಡ್ಡು ಖರ್ಚು ಮಾಡಿ ಮಾಲು ತಂದಿದ್ದೇವೆ. ಆದರೆ ಮಳೆ ಕೊರತೆಯಿಂದ ಜನರ ಆರ್ಥಿಕ ಪರಿಸ್ಥಿತಿ ಸಂಕಷ್ಟದಲ್ಲಿದ್ದು, ಹಬ್ಬಕ್ಕೆ ಬಾಳೆಗಿಡ ಕೊಳ್ಳುವವರ ಸಂಖ್ಯೆ ಕಡಿಮೆಯಾಗಿದೆ. ಇದ-ರಿಂದ ವ್ಯಾಪಾರವಾಗದೆ ಹಾಕಿದ ಬಂಡವಾಳ ವಾಪಸ್ ಬರುತ್ತದೆಯೋ ಇಲ್ಲವೋ ಎಂಬ ಆತಂಕ ಎದುರಾಗಿದೆ" ಎಂದು ದುರುಗವ್ವ ಭಜಂತ್ರಿ ವಣಗೇರಿ ಅಳಲು ತೋಡಿಕೊಂಡರು. ಮಳೆ ಕೈಕೊಟ್ಟಿರುವುದು ರೈತರ ಬದುಕಿನ ಮೇಲೆ ಮಾತ್ರವಲ್ಲದೆ, ಹಬ್ಬದ ವ್ಯಾಪಾರದ ಮೇಲೂ ಪರಿಣಾಮ ಬೀರಿದೆ. ವರಮಹಾಲಕ್ಷ್ಮಿ ಹಬ್ಬದ ಸಂಭ್ರಮದ ನಡುವೆಯೂ ಸಣ್ಣ ವ್ಯಾಪಾರಿಗಳು ಗ್ರಾಹಕರಿಗಾಗಿ ಕಾದು ಕುಳಿತುಕೊಳ್ಳುವಂತಾಗಿದೆ.




# ಡಿ ದೇವರಾಜ ಅರಸು ಅವರು ಸಾಮಾಜಿಕ ನ್ಯಾಯದ ಹರಿಕಾರರು: ಲಕ್ಷ್ಮಣ ಪಿಡಿಒ

❏ ನೈಜ್ಯ ದೆಸೆ ನ್ಯೂಸ್

ಹಾಲಾಪೂರ: ಗ್ರಾಮ ಪಂಚಾಯತಿಯಲ್ಲಿ ಕರ್ನಾಟಕದ ಪ್ರಸಿದ್ಧ ಮುಖ್ಯಮಂತ್ರಿ ಹಾಗೂ ಸಾಮಾಜಿಕ ಸುಧಾರಕರಾದ ಡಿ ದೇವರಾಜ ಅರಸು ಅವರ ಜಯಂತಿ ಪೂಜಾ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಲಕ್ಷ್ಮಣ ಮಾತನಾಡಿ, ಡಿ ದೇವರಾಜ ಅರಸುರು ಸತತ ಎರಡು ಸಲ ಮುಖ್ಯಮಂತ್ರಿಯಾಗಿ ಉತ್ತಮ ಆಡಳಿತ ಜನಪರ ಕಾರ್ಯಕ್ರಮಗಳನ್ನು ಕೊಟ್ಟಂತಹ ಮಹನ್ ನಾಯಕರು, ಹಿಂದುಳಿದ ವರ್ಗ, ದಲಿತರು ಮತ್ತು ಬಡವರ ಪರವಾಗಿ ಧ್ವನಿ ಎತ್ತಿದ ಸಾಮಾಜಿಕ ನ್ಯಾಯದ ಹರಿಕಾರರು, ಇವರ ಆಡಳಿತದಲ್ಲಿ ಉಳುವವನೆ ಹೊಲದೊಡೆಯ ಎಂಬ ಭೂಸುಧಾರಣೆ ಕ್ರಾಂತಿಕಾರಿ ಕಾಯ್ದೆಯನ್ನು ಜಾರಿಗೆ ತಂದು ಲಕ್ಷಾಂತರ ಗೇಣಿದಾರಿಗೆ ಭೂಮಿಯ ಒಡೆತನ ದೊರಕಿಸಿಕೊಟ್ಟರು. ಹಾಗೆ ಹಿಂದುಳಿದ ಆಯೋಗಗಳ ರಚನೆ,ಸಾಮಾಜಿಕ ಪಿಡುಗುಗಳ ವಿರುದ್ಧ ಉಚ್ಚಾಟನೆ,ಮೈಸೂರು ರಾಜ್ಯವನ್ನು ಕರ್ನಾಟಕ ಎಂದು ಮರುನಾಮಕರಣ, ಕೈಗಾರಿಕೆ ಕ್ಷೇತ್ರದಲ್ಲಿ ಹೊಸ ಹೊಸ ಕಾರ್ಖಾನೆ ಸ್ಥಾಪಿಸಿದ ಕೀರ್ತಿ ಇವರದು, ಹೀಗೆ ಹತ್ತಾರು ಯೋಜನೆಗಳನ್ನು ಜಾರಿಗೆ ತಂದು ರಾಜ್ಯವನ್ನು ಅಭಿವೃದ್ಧಿಪಡಿಸಿದ ಹೆಗ್ಗಳಿಕೆ ಡಿ ದೇವರಾಜ ಅರಸು ಅವರಿಗೆ ಸಲ್ಲುತ್ತದೆ ಎಂದು ಪಿಡಿಒ ಲಕ್ಷ್ಮಣ ಹೇಳಿದರು. ಈ ಸಂದರ್ಭದಲ್ಲಿ ಗ್ರಂಥ ಪಾಲಕ ಗ್ಯಾನಪ್ಪ ದೊಡ್ಡಮನಿ ಹಾಗೂ ಸಿಬ್ಬಂದಿ ವರ್ಗ, ಗ್ರಾಮಸ್ಥರು ಇದ್ದರು.



# ವಿಶ್ವ ಸೊಳ್ಳೆಗಳು ದಿನಾಚರಣೆ ಕಾರ್ಯಕ್ರಮ ಆಚರಣೆ

❏ ನೈಜ್ಯ ದೆಸೆ ನ್ಯೂಸ್

ಜವಳಗೇರಾ: ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು, ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಿಂಧನೂರು ಇವರ ಸಂಯುಕ್ತ ಆಶ್ರಯದಲ್ಲಿ ಅಂಗನವಾಡಿ ಕೇಂದ್ರದಲ್ಲಿ ವಿಶ್ವ ಸೊಳ್ಳೆ ದಿನಾಚರಣೆ ಕುರಿತು ಜನಜಾಗೃತಿ ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಅವರು ಮಾತನಾಡಿ, ಸೊಳ್ಳೆಗಳಿಂದ ಹರಡುವ ಮಲೇರಿಯಾ, ಡೆಂಗ್ಯೂ, ಚಿಕನ್‌ಗುನ್ಯಾ ಸೇರಿದಂತೆ ವಿವಿಧ ರೋಗಗಳ ಬಗ್ಗೆ ಜಾಗೃತಿ ಮೂಡಿಸಿದರು. ಮನೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳನ್ನು ಸ್ವಚ್ಛವಾಗಿಟ್ಟುಕೊಳ್ಳುವುದು, ನೀರು ನಿಲ್ಲದಂತೆ ನೋಡಿಕೊಳ್ಳುವುದು ಮತ್ತು ಸೊಳ್ಳೆಗಳ ಉತ್ಪತ್ತಿಯನ್ನು ತಡೆಗಟ್ಟುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ತಾಯಿಂದಿರಲ್ಲಿ ಮತ್ತು ಗರ್ಭಿಣಿಯರು. ಮತ್ತು ಮಕ್ಕಳಿಗೆ ಡೆಂಗ್ಯೂ ಮತ್ತು ಮಲೇ-ರಿಯಾ.ಹಾಗೂ ಮೆದುಳು ಜ್ವರದಂತ ಪ್ರಕರಣಗಳ ಹೆಚ್ಚಾಗಿ ರಕ್ತಹೀನತೆಯಿಂದ ಬಳಲುವವರಲ್ಲಿ ಈ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆ ಇದೆ ಎಂದು ತಿಳಿಸಿದರು.

ಪ್ರಾಥಮಿಕ ಆರೋಗ್ಯ ಸುರಕ್ಷಾ ಅಧಿಕಾರಿಗಳಾದ ನಿಂಗಮ್ಮ ಅವರು ಸೊಳ್ಳೆಗಳ ನಿಯಂತ್ರಣಕ್ಕೆ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಕುರಿತು ಮಾಹಿತಿ ನೀಡಿದರು. ಕುಡಿಯುವ ನೀರಿನ ಪಾತ್ರೆಗಳನ್ನು ಮುಚ್ಚಿಡುವುದು, ವಾರಕ್ಕೊಮ್ಮೆ ನೀರಿನ ಟ್ಯಾಂಕ್‌ಗಳನ್ನು ಸ್ವಚ್ಛಗೊಳಿಸುವುದು, ಸೊಳ್ಳೆ ಪರದೆಗಳ ಬಳಕೆ ಹಾಗೂ ಪರಿಸರ ಸ್ವಚ್ಛತೆ ಕಾಪಾಡಿಕೊಳ್ಳುವಂತೆ ಸಲಹೆ ನೀಡಿದರು. ಈ ಸಂದರ್ಭದಲ್ಲಿ ಅಂಗನವಾಡಿ ಕಾರ್ಯಕರ್ತೆ ಆದಿಲಕ್ಷ್ಮಿ, ಆಶಾ ಕಾರ್ಯಕರ್ತೆ ಲಕ್ಷ್ಮಿ, ತಾಯಂದಿರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.



# ಹಿರಿಯ ನಾಗರಿಕರ ಆರೋಗ್ಯ ಜಾಗೃತಿ ಹಾಗೂ ಸ್ನೇಹಿತರ ದಿನಾಚರಣೆ

❏ ನೈಜ್ಯ ದೆಸೆ ನ್ಯೂಸ್

ಕುಷ್ಟಗಿ: ನಗರದ ಬಸವ ಭವನದಲ್ಲಿ ಇನ್ನರ್ ವೀಲ್ ಕ್ಲಬ್ ಆಫ್ ಕುಷ್ಟಗಿ ವತಿಯಿಂದ "ಸ್ನೇಹ ಮತ್ತು ಸೇವೆ" ಎಂಬ ಧ್ಯೇಯದಡಿ ಹಿರಿಯ ನಾಗರಿಕರಿಗಾಗಿ ಆರೋಗ್ಯ ಜಾಗೃತಿ, ಸಂವಾದ ಹಾಗೂ ಸ್ನೇಹಿತರ ದಿನಾಚರಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾರ್ಯದರ್ಶಿ ಡಾ. ಪಾರ್ವತಿ ಪಲೋಟಿ ಅವರು ಹಿರಿಯ ನಾಗ-ರಿಕರು ಆರೋಗ್ಯ ಕಾಪಾಡಿಕೊಳ್ಳುವ ವಿಧಾನ, ಆರೋಗ್ಯಕರ ಆಹಾರ ಪದ್ಧತಿ, ನಿಯಮಿತ ವಾಯುವಿಹಾರ, ವ್ಯಾಯಾಮ ಹಾಗೂ ಉತ್ತಮ ಜೀವನಶೈಲಿಯ ಕು-ರಿತು ಉಪಯುಕ್ತ ಮಾಹಿತಿ ನೀಡಿದರು. ಇದೇ ಸಂದರ್ಭದಲ್ಲಿ ಹಿರಿಯ ನಾಗ-ರಿಕರೊಂದಿಗೆ ವಿಶೇಷ ಸಂವಾದ ನಡೆಸಲಾಯಿತು. ಹಿರಿಯರು ತಮ್ಮ ಉತ್ತಮ ಆರೋಗ್ಯದ ಗುಟ್ಟು, ಆಹಾರ ಪದ್ಧತಿ ಹಾಗೂ ಜೀವನಶೈಲಿಯ ಅನುಭವಗಳನ್ನು ಹಂಚಿಕೊಂಡರು. ಅವರ ಅನುಭವಗಳು ಇಂದಿನ ಮಹಿಳೆಯ-ರಿಗೆ ಪ್ರೇರಣಾದಾಯಕವಾಗಿದ್ದವು.




ಕಾರ್ಯಕ್ರಮದ ಅಂಗವಾಗಿ ಹಿರಿಯ ನಾಗರಿಕರಿಗೆ ಇನ್ನರ್ ವೀಲ್ ಹೆಸರಿನ ಬ್ಯಾಗ್‌ಗಳನ್ನು ಉಡುಗೊರೆಯಾಗಿ ನೀಡಲಾಯಿತು. ಸುಕನ್ಯಾ ಶೆಟ್ಟರ್ ಅವರು ವಿವಿಧ ಮನರಂಜನಾ ಆಟಗಳನ್ನು ನಡೆಸಿ, ವಿಜೇತರಿಗೆ ಬಹುಮಾನ ವಿತರಣೆಗೆ ಸಹಕರಿಸಿದರು. ಬಳಿಕ ಕ್ಲಬ್ ಸದಸ್ಯರು ಹಾಗೂ ಹಿರಿಯ ನಾಗರಿಕರು ಒಟ್ಟಾಗಿ ಸ್ನೇಹಿತರ ದಿನಾಚರಣೆಯನ್ನು ಆತ್ಮೀಯವಾಗಿ ಆಚರಿಸಿದರು. ಕಾರ್ಯಕ್ರಮದಲ್ಲಿ ಕ್ಲಬ್ ಅಧ್ಯಕ್ಷೆ ಗೌರಮ್ಮ ಕೂಡತನಿ, ಕಾರ್ಯದರ್ಶಿ ಶ್ರೀದೇವಿ ಮಸ್ಕಿಮಠ, ಜಿಲ್ಲಾ ಕಾರ್ಯದರ್ಶಿ ಡಾ. ಪಾರ್ವತಿ ಪಲೋಟಿ, ಖಜಾಂಚಿ ಪ್ರಭಾ ಬಂಗಾರಶೆಟ್ಟರ್, ಆಯೋಜಕಿ ವಂದನಾ ಗೋಗಿ, ಸಂಪಾದಕಿ ಶಾರದಾ ಶೆಟ್ಟರ್ ಹಾಗೂ ತಕ್ಷಣದ ಪೂರ್ವಾಧ್ಯಕ್ಷೆ ಗಿರಿಜಾ ಮಾಲಿ ಪಾಟೀಲ್ ಸೇರಿದಂತೆ ಕ್ಲಬ್‌ನ ಸದಸ್ಯರು ಉಪಸ್ಥಿತರಿದ್ದರು.

## ಸಾಹಿತ್ಯ ಸಿಂಚನ

### ದೇವದಾಸಿ

ದೇವರ ಹೆಸರಲ್ಲಿ ದಾಸಿಯಾದಳು
ಬದುಕಿನ ಬೆಳಕನ್ನೇ ಕಳೆದುಕೊಂಡಳು
ಹೂವಿನಂತೆ ಅರಳಬೇಕಾದ ಬಾಲ್ಯ
ಮುಡಿಯಾಗದೆ ಮಣ್ಣು ಪಾಲಾಯಿತು

ದೇವಾಲಯದ ಗಂಟೆಯ ನಾದದಲ್ಲಿ
ಅವಳ ಕಣ್ಣೀರಿನ ಶಬ್ದ ಯಾರಿಗೂ ಕೇಳಲಿಲ್ಲ
ಆರತಿ ಬೆಳಕಿನಲ್ಲಿ ಕಂಗೊಳಿಸಿದಳು
ಆದ್ರೆ ಬದುಕಿನ ಕತ್ತಲಲ್ಲಿ ಒಂಟಿಯಾದಳು

ಸಮಾಜ ಅವಳನ್ನು ದೇವತೆ ಎಂದಿತು
ಆದರೆ ಮನುಷ್ಯಳಾಗಿ ಕಾಣಲಿಲ್ಲ
ಹಾಡು ಕುಣಿತ ಕಲಿಸಿದರು
ಆದ್ರೆ ಸ್ವತಂತ್ರ ಬದುಕು ಕೊಡಲಿಲ್ಲ

ಕನಕ ದಾಸ "ಕುಲ ಕುಲವೆಂದು" ಕೇಳಿದ
ಬಸವಣ್ಣ "ಕಾಯಕವೇ ಕೈಲಾಸ" ಎಂದ
ಆದ್ರೆ ಇವಳ ಕುಲ ಯಾವುದು?
ಇವಳ ಕಾಯಕ ಯಾವುದು ?

ಈಗ ಕಾನೂನು ಅವಳ ಕೈ ಹಿಡಿದಿದೆ
ಶಿಕ್ಷಣ ಅವಳಿಗೆ ದಾರಿ ತೋರಿದೆ
ದೇವದಾಸಿಯಲ್ಲ, ದೇವತೆಯ ಮಗಳು ಅವಳು
ಸ್ವಾಭಿಮಾನದ ಬದುಕು ಅವಳ ಹಕ್ಕು

ಮೂಢನಂಬಿಕೆ ಸುಟ್ಟು ಬೂದಿ ಮಾಡೋಣ
ಹೆಣ್ಣುಮಕ್ಕಳಿಗೆ ಗೌರವ ಕೊಡೋಣ
ದೇವರು ಇರೋದು ಗುಡಿಯಲ್ಲಿ ಅಲ್ಲ
ಪ್ರತಿ ಜೀವದ ಉಸಿರಿನಲ್ಲಿ

ಮತ್ತೊಬ್ಬ ದೇವದಾಸಿ ಹುಟ್ಟದಿರಲಿ
ಇದೇ ನನ್ನ ಪ್ರಾರ್ಥನೆ,
ಇದೇ ನನ್ನ ಕವನ

ಎಸ್. ದುರಗಪ್ಪ. ಕುಷ್ಟಗಿ.
ಬರಹಗಾರ ಹಾಗೂ ಕನ್ನಡ ಚಲನಚಿತ್ರ ಸಹ-ನಟ. 8095727664

## ಸಿಂಧನೂರಿನಲ್ಲಿ ವಿಶ್ವ ಸೊಳ್ಳೆಗಳ ದಿನಾಚರಣೆ ಹಾಗೂ ಜಾಗೃತಿ ಅಭಿಯಾನ

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಸೊಳ್ಳೆಗಳಿಂದ ಹರಡುವ ಮಾರಕ ಕಾಯಿಲೆಗಳ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಪ್ರತಿವರ್ಷ ಆಗಸ್ಟ್ 20ರಂದು ವಿಶ್ವ ಸೊಳ್ಳೆಗಳ ದಿನವನ್ನಾಗಿ ಆಚರಿಸಲಾಗುತ್ತದೆ. 1897ರ ಆಗಸ್ಟ್ 20ರಂದು ಭಾರತೀಯ ಸಂಜಾತ ಬ್ರಿಟಿಷ್ ವೈದ್ಯ ಸರ್ ರೊನಾಲ್ಡ್ ರಾಸ್ ಅವರು ಸೊಳ್ಳೆಗಳ ಮೂಲಕ ಮನುಷ್ಯನಿಗೆ ಮಲೇರಿಯಾ ರೋಗ ಹರಡುತ್ತದೆ ಎಂಬುದನ್ನು ಸಂಶೋಧಿಸಿ ಜಗತ್ತಿಗೆ ತಿಳಿಸಿದರು ಎಂದು ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳದ ಡಾ. ಮೇರಿ ಹೇಳಿದರು.**

ಜಿಲ್ಲಾಡಳಿತ ಜಿಲ್ಲಾ ಆಡಳಿತ ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ಮತ್ತು ರೋಗವಾಹಕ ಆಶ್ರೀತ ರೋಗಗಳ ನಿಯಂತ್ರಣ ವಿಭಾಗ ರಾಯಚೂರು ನಗರ.ಆ.ಕೇಂದ್ರ ಸಿಂಧನೂರ ರವರ ಸಂಯುಕ್ತ ಆಶ್ರಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡುತ್ತ ಈ ಅಪರೂಪದ ವೈದ್ಯಕೀಯ ಕೊಡುಗೆಗಾಗಿ ಅವರಿಗೆ 1902ರಲ್ಲಿ ಪ್ರತಿಷ್ಠಿತ ನೊಬೆಲ್ ಪ್ರಶಸ್ತಿ ನೀಡಿ ಗೌರವಿಸಲಾಯಿತು.



ಜಗತ್ತಿನ ಕೀಟ ಪ್ರಭೇದಗಳಲ್ಲಿ ಸೊಳ್ಳೆಗಳು ಅತ್ಯಂತ ಅಪಾಯಕಾರಿಯಾಗಿದ್ದು, ಮಾನವನ ಆರೋಗ್ಯಕ್ಕೆ ನಿರಂತರ ಕಂಟಕವಾಗಿ ಪರಿಣಮಿಸಿವೆ.

ಹೆಣ್ಣು ಅನಾಫಿಲಿಸ್ ಸೊಳ್ಳೆಯಿಂದ ಮಲೇರಿಯಾ ರೋಗ ಹರಡಿದರೆ, ಈಡಿಸ್ ಸೊಳ್ಳೆಗಳಿಂದ ಡೆಂಗ್ಯೂ ಮತ್ತು ಚಿಕೂನ್‌ಗುನ್ಯಾ ರೋಗಗಳು ಹರಡುತ್ತವೆ. ಕ್ಯೂಲೆಕ್ಸ್ ಸೊಳ್ಳೆಯು ಮೆದುಳು ಜ್ವರ ಹಾಗೂ ಆನೆಕಾಲು ರೋಗಗಳನ್ನು ಸಮುದಾಯದಲ್ಲಿ ಹರಡಲು ಕಾರಣವಾಗುತ್ತದೆ. ವಿಶೇಷವಾಗಿ ಮಳೆಗಾಲದಲ್ಲಿ ಎಲ್ಲೆಂದರಲ್ಲಿ ನೀರು ನಿಲ್ಲುವುದರಿಂದ ಸೊಳ್ಳೆಗಳ ಸಂತಾನೋತ್ಪತ್ತಿ ಹೆಚ್ಚಾಗಿ ರೋಗಗಳು ಉಲ್ಬಣಗೊಳ್ಳುತ್ತವೆ. ಸೊಳ್ಳೆಗಳ ನಿಯಂತ್ರಣಕ್ಕಾಗಿ ಮನೆಯ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಂಡು ಚರಂಡಿಗಳಲ್ಲಿ ನೀರು ಸರಾಗವಾಗಿ ಹರಿಯುವಂತೆ ನೋಡಿಕೊಳ್ಳಬೇಕು.ಶ್ರೀಮತಿ ಗೀತಾ ಹಿರೇಮಠ್ ತಾಲೂಕು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ತಾಲೂಕಾ ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಸಿಂಧನೂರು ಇವರು ಮಾತನಾಡಿ,ಮನೆ ಸುತ್ತಮುತ್ತಲಿನ ತೆಂಗಿನ ಚಿಪ್ಪು, ಹಳೆಯ ಟೈರ್, ಖಾಲಿ ಡಬ್ಬಿ ಹಾಗೂ ಏರ್ ಕೂಲರ್‌ಗಳಲ್ಲಿ ನೀರು ಸಂಗ್ರಹವಾಗದಂತೆ ಎಚ್ಚರವಹಿಸಬೇಕು. ನಿಂತ ನೀರಿನ ತಾಣಗಳಲ್ಲಿ ಸೊಳ್ಳೆ ಮರಿಗಳನ್ನು ತಿನ್ನುವ ಗಪ್ಪಿ ಮೀನುಗಳನ್ನು ಬಿಡುವುದರೊಂದಿಗೆ ಲಾರ್ವಾನಾಶಕ ಔಷಧಿಗಳನ್ನು ಸಿಂಪಡಿಸುವುದು ಅತ್ಯಗತ್ಯವಾಗಿದೆ. ಜನರು ಸೊಳ್ಳೆ ಕಡಿತದಿಂದ ರಕ್ಷಣೆ ಪಡೆಯಲು ಸೊಳ್ಳೆ ಪರದೆ ಹಾಗೂ ಮೈ ಪೂರ್ತಿ ಮುಚ್ಚುವ ಬಟ್ಟೆಗಳನ್ನು ಬಳಸಬೇಕು.

ಯಾವುದೇ ರೀತಿಯ ಜ್ವರ, ಚಳಿಜ್ವರ ಅಥವಾ ಮೈಕೈ ನೋವು ಕಂಡುಬಂದಲ್ಲಿ ತಕ್ಷಣವೇ ಸಮೀಪದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ತೆರಳಿ ರಕ್ತ ಪರೀಕ್ಷೆ ಮಾಡಿಸಿಕೊಳ್ಳಬೇಕು. ಸೊಳ್ಳೆಗಳ ನಿರ್ಮೂಲನೆ ಕೇವಲ ಇಲಾಖೆಯ ಕೆಲಸವಲ್ಲದೆ ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದ್ದು, ಸಾರ್ವಜನಿಕರ ಸಹಭಾಗಿತ್ವದಿಂದ ಮಾತ್ರ ರೋಗಮುಕ್ತ ಸಮಾಜ ನಿರ್ಮಾಣ ಸಾಧ್ಯ. ಬನ್ನಿ, ಈ ವಿಶ್ವ ಸೊಳ್ಳೆ ದಿನದಂದು ಸೊಳ್ಳೆಗಳ ಉತ್ಪತ್ತಿ ತಾಣಗಳನ್ನು ನಾಶಪಡಿಸಿ, ಆರೋಗ್ಯವಂತ ನಾಡು ಕಟ್ಟಲು ನಾವೆಲ್ಲರೂ ಕೈಜೋಡಿಸೋಣ. ಈ ಸಂದರ್ಭದಲ್ಲಿ ಹನುಮಂತ್ ಊಖಿಔ, ಮಲ್ಲಪ್ಪ ಒಐಫ, ತಿಪ್ಪೇರುದ್ರಸ್ವಾಮಿ ಐಖಿಔ, ಮಹದೇವಿ ಖ/ಓ, ವೀರಣ್ಣ ಆಔ, ಎಲ್ಲಾ ಆಶಾ ಕಾರ್ಯಕರ್ತೆಯರು ಸಾರ್ವಜನಿಕರು ಉಪಸ್ಥಿತರಿದ್ದರು.

## ತುಂಗಭದ್ರಾ ಬಲದಂಡೆ ಕಾಲುವೆಗೆ ನೀರು ಹರಿಸುವಂತೆ ಅಧಿವೇಷನದಲ್ಲಿ ಆಗ್ರಹಿಸಿದ ಕಂಪ್ಲಿ ಶಾಸಕ ಜೆ.ಎನ್.ಗಣೇಶ್

❑ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ : ತುಂಗಭದ್ರಾ ಜಲಾಶಯದ ಬಲದಂಡೆ ಕೆಳಮಟ್ಟದ ಕಾಲುವೆಗೆ ಬಚಾತ್ ಆಯೋಗದ ಪ್ರಕಾರ ಪೂರ್ಣ ಪ್ರಮಾಣದ ನೀರನ್ನು ಹರಿಸಿದರೆ ಮಾತ್ರ ರಾಜ್ಯ ರೈತರಿಗೆ ಅನುಕೂಲವಾಗಲಿದೆ ಎಂದು ಶಾಸಕ ಜೆ.ಎನ್. ಗಣೇಶ್ ಇಂದು ಅಧಿವೇಷನದಲ್ಲಿ ಸರ್ಕಾರವನ್ನು ಆಗ್ರಹಿಸಿದರು,**

ಬೆಂಗಳೂರಿನ ವಿಧಾನಸೌಧದಲ್ಲಿ ನಡೆದ ಅಧಿವೇಷನದಲ್ಲಿ ಮಾತನಾಡಿದ ಕಂಪ್ಲಿ ಶಾಸಕರಾದ ಜೆ.ಎನ್.ಗಣೇಶ್ ಅವರು ಆ.11 ರಂದು ಮುನಿರಾಬಾದಿನಲ್ಲಿ ನೀರಾವರಿ ಸಲಹಾ ಸಮಿತಿ ಸಭೆ ಜರುಗಿತು. ಆ ಸಭೆಯಲ್ಲಿ ನಮಗೆ



ಕರ್ನಾಟಕ ಕೋಟಾ 750 ಕ್ಯೂಸೆಕ್ಸ್ ಮತ್ತು ಆಂಧ್ರ ಕೋಟಾ 750 ಕ್ಯೂಸೆಕ್ಸ್ ನೀರು ಬಿಡುವಂತೆ ಬಚಾವತ್ ಆಯೋಗದ ಪ್ರಕಾರ ಕಾಲುವೆ ನಿರ್ಮಾಣವಾಗಿದೆ. ಆದರೆ ಆಂಧ್ರ ಬೋರ್ಡಿನವರು ನೀರು ತೆಗೆದುಕೊಂಡಿಲ್ಲ. ಕೇವಲ ರಾಜ್ಯದ ಕೋಟಾ ಮಾತ್ರ ನೀರು ಬಿಟ್ಟಿರುವುದರಿಂದ ನಮ್ಮ ರೈತರಿಗೆ ಅನುಕೂಲವಾಗುತ್ತಿಲ್ಲ ನಮ್ಮ ಭಾಗದಲ್ಲಿ ಈಗಾಗಲೇ ಭತ್ತದ ಸಸಿ ಮಡಿಗಳನ್ನು ಮಾಡಿದ್ದಾರೆ, ಕೆಲವು ಕಡೆಗಳಲ್ಲಿ ಭತ್ತದ ನಾಟಿ ಆರಂಭವಾಗಿರುವುದರಿಂದ ಕೂಡಲೇ ಎರಡು ನೀರು ತೆಗೆದುಕೊಂಡು ಹೋದರೆ ಮಾತ್ರ ಅನುಕೂಲವಾಗಲಿದೆ.

ಜಿಲ್ಲೆಯ ನಾಲ್ಕು ತಾಲ್ಲೂಕುಗಳಿಗೆ ಅನುಕೂಲವಾಗಲಿದೆ. ಕೂಡಲೇ ನೀರನ್ನು ಬಿಡದಿದ್ದರೆ ನಮ್ಮ ರೈತರು ವಿಷ ಕುಡಿಯುವ ಪರಿಸ್ಥಿತಿ ಇದೆ. ಆದ್ದರಿಂದ ಆಂಧ್ರಪ್ರದೇಶದ ನೀರಾವರಿ ಸಚಿವರೊಂದಿಗೆ ಚರ್ಚಿಸಿ ಕೂಡಲೇ ಕಾಲುವೆಗೆ ಪೂರ್ಣ ಪ್ರಮಾಣದ ನೀರನ್ನು ಮತ್ತು ತುಂಗಭದ್ರಾ ನದಿಗೆ 500 ಕ್ಯೂಸೆಕ್ಸ್ ನೀರನ್ನು ಬಿಡಿಸಬೇಕೆಂದು ಮನವಿ ಮಾಡಿದರು. ಇದಕ್ಕೆ ಉತ್ತರಿಸಿದ ಜಲಸಂಪನ್ಮೂಲ ಸಚಿವರಾದ ಚೆಲುವನಾರಾಯಣಸ್ವಾಮಿ ಅವರು ಕಳೆದ ಮೂರು ದಿನಗಳಿಂದ ಶಾಸಕ ಗಣೇಶ್ ಮತ್ತು ಜಿಲ್ಲಾ ಸಚಿವರು ತಮ್ಮೊಂದಿಗೆ ನೀರಿನ ಸಮಸ್ಯೆಯನ್ನು ವಿವರಿಸಿದ್ದು, ನಾನು ಕೂಡ ಈಗಾಗಲೇ ಆಂಧ್ರಪ್ರದೇಶ ನೀರಾವರಿ ಸಚಿವರೊಂದಿಗೆ ಚರ್ಚಿಸಿದ್ದೇನೆ. ಮುಖ್ಯಮಂತ್ರಿಗಳು ಕೂಡ ಅಲ್ಲಿನ ಸಚಿವರೊಂದಿಗೆ ಚರ್ಚಿಸಲಾಗಿದೆ. ಈಗಾಗಲೇ ಅಲ್ಲಿನ ಸಚಿವರೂ ಸಹಿತ ಎರಡು ರಾಜ್ಯಗಳ ಪಾಲಿನ ನೀರನ್ನು ಒಟ್ಟಿಗೆ ಹರಿಸುವುದಕ್ಕೆ ಸಹಮತವನ್ನು ವ್ಯಕ್ತಪಡಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಇನ್ನು ಎರಡು ಮೂರು ದಿನಗಳಲ್ಲಿ ನೀರಿನ ಸಮಸ್ಯೆಯನ್ನು ಬಗೆಹರಿಸುವುದಾಗಿ ಭರವಸೆಯನ್ನು ನೀಡಿದರು.

## ಇಂದು ದತ್ತಿ ಕಾರ್ಯಕ್ರಮ, 'ಸಣ್ಣಗೌಡಸಾನಿ' ನಾಟಕ ಪ್ರದರ್ಶನ

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಕನ್ನಡ ಸಾಹಿತ್ಯ ಪರಿಷತ್ತು, ಸಮುದಾಯದ ಸಂಯುಕ್ತಾಶ್ರಯದಲ್ಲಿ ದಿ.21ರ ಶುಕ್ರವಾರದಂದು ನಗರದ ಟೌನ್ ಹಾಲ್ ನಲ್ಲಿ ಕಸಾಪ ದತ್ತಿ ಉಪನ್ಯಾಸ ಮಾಲಿಕೆ ಹಾಗೂ ನಾಡೋಜ ಶಾಂತರಸ ಕಾದಂಬರಿ ಆಧಾರಿತ ನಾಟಕ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ ಎಂದು ಕಸಾಪ ಗೌರವ ಕಾರ್ಯದರ್ಶಿ**



ನಾಗರಾಜ ಅರಳಿಮರ ತಿಳಿಸಿದ್ದಾರೆ.

ಗುರುವಾರ ಹೇಳಿಕೆ ನೀಡಿರುವ ಅವರು, ದಿ.ಚಂದ್ರಶೇಖರ ನೆಟೆಕಲ್ ಗೊರೇಬಾಳ, ದಿ.ಎನ್. ಚಂದ್ರೇಗೌಡ ಶರಣೇಗೌಡ ಗೊರೇಬಾಳ, ದಿ.ಬಸವರಾಜ ಬಿ., ದಿ.ಮರಿಸ್ವಾಮಿ ದತ್ತಿ ಪ್ರಯುಕ್ತ ರಂಗಭೂಮಿ ವಿಷಯವಾಗಿ ದತ್ತಿ ಉಪನ್ಯಾಸಕ ಕಾರ್ಯಕ್ರಮ ಹಾಗೂ ಪ್ರವೀಣ ಗುಂಜಳ್ಳಿ ಅವರ ವಿನ್ಯಾಸ ಮತ್ತು ನಿರ್ದೇಶನದ, ರಂಗಾಯಣ ಕಲಬುರ್ಗಿ ಪ್ರಸ್ತುತ ಪಡಿಸಿರುವ 'ಸಣ್ಣ ಗೌಡಸಾನಿ' ನಾಟಕ ಕಾರ್ಯಕ್ರಮವನ್ನು ಆಯೋಜಿಸಿದ್ದು, ಕಸಾಪ ತಾಲ್ಲೂಕು ಅಧ್ಯಕ್ಷ ಹೆಚ್.ಎಫ್.ಮಸ್ಕಿ ಕಾರ್ಯಕ್ರಮದ ಅಧ್ಯಕ್ಷತೆವಹಿಸಲಿದ್ದು, ಸಮುದಾಯದ ರಾಜ್ಯ ಖಜಾಂಚಿ ಎಸ್. ದೇವೆಂದ್ರಗೌಡ ಉದ್ಘಾಟಿಸಲಿದ್ದಾರೆ. ದತ್ತಿದಾನಿಗಳಾದ ನಿವೃತ್ತ ಉಪನ್ಯಾಸಕ ಗುರುಬಸ್ಸಪ್ಪ ಹೇಮವಾಡಗಿ, ನಯೋಪ್ರಾದ ಅಧ್ಯಕ್ಷ ಮಾಜಿ ಅಧ್ಯಕ್ಷ ಎನ್.ಶಿವನಗೌಡ ಗೊರೇಬಾಳ, ಅಮರಯ್ಯಸ್ವಾಮಿ ಬಿ ಕೋಟೆ, ಬಸಮ್ಮ ಮರಿಸ್ವಾಮಿ ಕೆ.ಹೊಸಳ್ಳಿ ಭಾಗವಹಿಸಲಿದ್ದಾರೆ ಎಂದು ವಿವರಿಸಿದ್ದಾರೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

## ಮಾಜಿ ಶಾಸಕರ ಹೇಳಿಕೆ ರಾಜಕೀಯ ಪ್ರೇರಿತ, ವಾಸ್ತವಾಂಶದ ವಿರುದ್ಧ : ದೊಡ್ಡ ಬಸವರಾಜ ಬಡಗಿ

❑ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ : ರೈತರ ಸಮಸ್ಯೆ, ಕಾಲುವೆಗಳಿಗೆ ನೀರು ಹಾಗೂ ಕ್ಷೇತ್ರದ ಅಭಿವೃದ್ಧಿ ವಿಚಾರಗಳನ್ನು ಮುಂದಿಟ್ಟುಕೊಂಡು ಮಾಜಿ ಶಾಸಕ ಟಿ.ಎಚ್. ಸುರೇಶ್ ಬಾಬು ಅವರು ಹಾಲಿ ಶಾಸಕ ಜೆ.ಎನ್. ಗಣೇಶ್ ವಿರುದ್ಧ ಮಾಡಿರುವ ಆರೋಪಗಳು ರಾಜಕೀಯ ಪ್ರೇರಿತವಾಗಿದ್ದು, ವಾಸ್ತವಾಂಶಗಳಿಗೆ ವಿರುದ್ಧವಾಗಿವೆ ಎಂದು ಶಾಸಕ ಜೆ.ಎನ್. ಗಣೇಶ್ ಅವರ ಬೆಂಬಲಿಗ ಕಾಂಗ್ರೆಸ್ ಮುಖಂಡ ದೊಡ್ಡ ಬಸವರಾಜ್ ಬಡಗಿ ತೀವ್ರವಾಗಿ ಖಂಡಿಸಿದರು.**

ಪಟ್ಟಣದಲ್ಲಿ ಬುಧವಾರ ಪತ್ರಕರ್ತರೊಂದಿಗೆ ಮಾತನಾಡಿ, ಕಾಲುವೆಗಳಿಗೆ ನೀರು ಹರಿಸುವುದು ಜಲಾಶಯಗಳ ನೀರಿನ ಮಟ್ಟ, ನೀರಿನ ಲಭ್ಯತೆ, ನೀರಾವರಿ ಇಲಾಖೆಯ ತಾಂತ್ರಿಕ ನಿರ್ಧಾರಗಳು, ಹಾಗೂ ಮೂರು ರಾಜ್ಯದ ಜೀವನಾಡಿಯಾದ ತುಂಗಭದ್ರೆಯಿಂದ ನೀರು ಹರಿಸಲು 3 ರಾಜ್ಯ ಸರ್ಕಾರದೊಂದಿಗೆ ಚರ್ಚಿಸುವುದು ಮತ್ತು ಸಂಬಂಧಪಟ್ಟ ಇಲಾಖೆಗಳ ಸಮನ್ವಯದ ಆಧಾರದ ಮೇಲೆ ನೀರು ಬಿಡುಗಡೆ ಮಾಡಲಾಗುತ್ತದೆ. ಈ ವಾಸ್ತವಾಂಶ ತಿಳಿದಿದ್ದರೂ ಮಾಜಿ ಶಾಸಕರು ಸಂಪೂರ್ಣ ಹೊಣೆಯನ್ನು ಹಾಲಿ ಶಾಸಕರ ಮೇಲೆ ಹೊರಿಸುತ್ತಿರುವುದು ಜನರನ್ನು ದಾರಿ ತಪ್ಪಿಸುವ ಪ್ರಯತ್ನವಾಗಿದೆ. "ಕಾಲುವೆಗೆ ನೀರು ಬಂದಿಲ್ಲ, ಶಾಸಕರನ್ನು ಊರೊಳಗೆ ಬಿಟ್ಟುಕೊಡಬೇಡಿ" ಎಂಬ ಹೇಳಿಕೆ ಜವಾಬ್ದಾರಿಯುತ ಮಾಜಿ ಶಾಸಕರಿಗೆ ಶೋಭೆ ತರುವಂತಹದ್ದಲ್ಲ. ರೈತರ ಸಮಸ್ಯೆಗಳನ್ನು ಪರಿಹರಿಸುವ ಬದಲು ಜನರಲ್ಲಿ ಪ್ರಚೋದನೆ ಹಾಗೂ ದ್ವೇಷದ ವಾತಾವರಣ ನಿರ್ಮಿಸುವ ಪ್ರಯತ್ನ ನಡೆಯುತ್ತಿದೆ.

ಶಾಸಕ ಜೆ.ಎನ್. ಗಣೇಶ್ ಅವರು ರೈತರ ನೀರಾವರಿ ಸಮಸ್ಯೆಗಳ ಕುರಿತು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ನಿರಂತರವಾಗಿ ಚರ್ಚಿಸುತ್ತಿದ್ದು,



ಅಗತ್ಯ ಕ್ರಮ ಕೈಗೊಳ್ಳುತ್ತಿದ್ದಾರೆ. ಕ್ಷೇತ್ರದ ಅಭಿವೃದ್ಧಿ ಹಾಗೂ ರೈತರ ಸಮಸ್ಯೆಗಳ ಕುರಿತು ಜನರ ಮುಂದೆ ಲೆಕ್ಕ ನೀಡಲು ಶಾಸಕರು ಸದಾ ಸಿದ್ಧರಾಗಿದ್ದಾರೆ. ಮಾಜಿ ಶಾಸಕರು ನಿಜವಾಗಿಯೂ ರೈತರ ಬಗ್ಗೆ ಕಾಳಜಿ ಹೊಂದಿದ್ದರೆ, ಮಾಧ್ಯಮಗಳ ಮೂಲಕ ಆರೋಪ ಮಾಡುವ ಬದಲು ಸಂಬಂಧಪಟ್ಟ ಇಲಾಖೆಗಳೊಂದಿಗೆ ಚರ್ಚಿಸಿ ಸಮಸ್ಯೆ ಪರಿಹಾರಕ್ಕೆ ಸಹಕರಿಸಬೇಕು. ಅಧಿಕಾರದಲ್ಲಿದ್ದ ಅವಧಿಯಲ್ಲಿ ತಮ್ಮಿಂದ ಕೈಗೊಂಡ ಅಭಿವೃದ್ಧಿ ಕಾರ್ಯಗಳ ವಿವರವನ್ನು ಜನರ ಮುಂದಿಡಬೇಕು. ಯಾರು ಎಷ್ಟು ಕೆಲಸ ಮಾಡಿದ್ದಾರೆ ಎಂಬುದನ್ನು ಕಂಪ್ಲಿ ಕ್ಷೇತ್ರದ ಜನತೆ ತೀರ್ಮಾನಿಸಲಿದ್ದಾರೆ ಹಾಗೂ ಕ್ಷೇತ್ರದಲ್ಲಿ ನಿಮ್ಮ ಕೊಡುಗೆ, ಅಭಿವೃದ್ಧಿ ಏನು..? ಎಂದು ಬಸವರಾಜ್ ಟೀಕಿಸಿದರು.

"ಟೀಕೆಗಳು ಸಾಯುತ್ತವೆ-ಕೆಲಸಗಳು ಜೀವಿಸುತ್ತವೆ" ಎಂಬ ಶಾಸಕ ಗಣೇಶ್ ರವರ ಮಾತಿನಂತೆ "ಸುಳ್ಳು ಆರೋಪಗಳಿಗೆ ಉತ್ತರ ನೀಡುವುದಕ್ಕಿಂತ ಅಭಿವೃದ್ಧಿ ಕೆಲಸಗಳ ಮೂಲಕವೇ ಉತ್ತರ ನೀಡುತ್ತೇವೆ. ಕ್ಷೇತ್ರದ ಜನರ ಸಮಸ್ಯೆಗಳಿಗೆ ಸ್ಪಂದಿಸುವುದು ನಮ್ಮ ಆದ್ಯತೆ. ರಾಜಕೀಯ ಕಾರಣಕ್ಕಾಗಿ ರೈತರನ್ನು ತಪ್ಪುದಾರಿಗೆ ಎಳೆಯುವ ಪ್ರಯತ್ನವನ್ನು ಜನರು ಒಪ್ಪುವುದಿಲ್ಲ". ಕಾಲುವೆ ನೀರು, ರೈತರ ಸಮಸ್ಯೆ ಹಾಗೂ ಕ್ಷೇತ್ರದ ಅಭಿವೃದ್ಧಿ ಕುರಿತು ಯಾವುದೇ ಬಹಿರಂಗ ಚರ್ಚೆಗೆ ಶಾಸಕ ಜೆ.ಎನ್. ಗಣೇಶ್ ಅವರು ಸಿದ್ಧರಾಗಿದ್ದಾರೆ. ಆರೋಪಗಳಿಂದ ಅಭಿವೃದ್ಧಿಯ ವೇಗವನ್ನು ತಡೆಯಲು ಸಾಧ್ಯವಿಲ್ಲ. ಜನರ ಆಶೀರ್ವಾದ ಹಾಗೂ ಸಹಕಾರದೊಂದಿಗೆ ಕ್ಷೇತ್ರದ ಅಭಿವೃದ್ಧಿ ಮುಂದುವರಿಯಲಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

## ಪಡಿತರ ವಿತರಣೆಯ ಸರ್ವರ್ ಸಮಸ್ಯೆ ಪರಿಹರಿಸಲು ನ್ಯಾಯಬೆಲೆ ಅಂಗಡಿ ಮಾಲೀಕರ ಆಗ್ರಹ

❑ ನೈಜ್ಯ ದೆಸೆ ನ್ಯೂಸ್

**ಕುಷ್ಟಗಿ: ಪಡಿತರ ವಿತರಣೆ ವೇಳೆ ಎದುರಾಗುತ್ತಿರುವ ಸರ್ವರ್ ಸಮಸ್ಯೆಯನ್ನು ಶೀಘ್ರವಾಗಿ ಪರಿಹರಿಸಬೇಕು ಎಂದು ಒತ್ತಾಯಿಸಿ ಸರ್ಕಾರಿ ನ್ಯಾಯಬೆಲೆ ಅಂಗಡಿ ಮಾಲೀಕರ ಸಂಘದ ತಾಲೂಕು ಘಟಕದ ಪದಾಧಿಕಾರಿಗಳು ಬುಧವಾರ ಗ್ರೇಡ್?2 ತಹಸೀಲ್ದಾರ್ ರಜನಿಕಾಂತ್ ಕೆಂಗೇರಿ ಅವರಿಗೆ ಮನವಿ ಸಲ್ಲಿಸಿದರು.**

ಸಂಘದ ತಾಲೂಕು ಅಧ್ಯಕ್ಷ ಸಂಗನಗೌಡ ಚಳಗೇರಿ ಮಾತನಾಡಿ, ಸರ್ಕಾರದ ಸೂಚನೆಯಂತೆ ಬೆಳಗ್ಗೆ 10ರಿಂದ ಸಂಜೆ 6ರವರೆಗೆ ಪಡಿತರ ವಿತರಣೆ ಮಾಡಲಾಗುತ್ತಿದೆ. ಆದರೆ ಸರ್ವರ್ ಸಮಸ್ಯೆಯಿಂದಾಗಿ ಪಡಿತರ ವಿತರಣೆ ವಿಳಂಬವಾಗುತ್ತಿದ್ದು, ದಿನವಿಡೀ ಸರ್ವರ್ ಇಲ್ಲದೆ 15?20 ಕಾರ್ಡ್‌ದಾರರಿಗೂ ಪಡಿತರ ನೀಡಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಹೇಳಿದರು. ತಾಲೂಕಿನ



ನ್ಯಾಯಬೆಲೆ ಅಂಗಡಿಗಳಿಗೆ ಪ್ರತಿ ತಿಂಗಳು 20ನೇ ತಾರೀಖಿನೊಳಗೆ ಪಡಿತರ ಧಾನ್ಯ ಸರಬರಾಜು ಮಾಡಬೇಕು. ಗೋದಾಮುಗಳಿಂದ ಅಂಗಡಿಗಳಿಗೆ ಧಾನ್ಯ ತಲುಪಿದರೂ ಎರಡು?ಮೂರು ದಿನಗಳವರೆಗೆ ಬಿಲ್ ಆಗದ ಕಾರಣ ವಿತರಣೆ ವಿಳಂಬವಾಗುತ್ತಿದೆ. ಆದ್ದರಿಂದ ಧಾನ್ಯ ಪೂರೈಕೆಯಾದ ಕೂಡಲೇ ಬಿಲ್ ಮಾಡುವ ವ್ಯವಸ್ಥೆ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಹನಮನಾಳ ಹೋಬಳಿಯ 17 ನ್ಯಾಯಬೆಲೆ ಅಂಗಡಿಗಳಿಗೆ ಯಲಬುರ್ಗಾ ಆಹಾರ ಗೋದಾಮಿನಿಂದ ಪಡಿತರ ಧಾನ್ಯ ಸರಬರಾಜು ವಿಳಂಬವಾಗುತ್ತಿದೆ. ಈ ಸಮಸ್ಯೆಯನ್ನು ಕೂಡಲೇ ಬಗೆಹರಿಸಿ ಪಡಿತರದಾರರಿಗೆ ಸಮಯಕ್ಕೆ ಸರಿಯಾಗಿ ಧಾನ್ಯ ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಆಗ್ರಹಿಸಿದರು.

ಈ ಸಂದರ್ಭದಲ್ಲಿ ಪಡಿತರ ವಿತರಕರಾದ ಚಂದ್ರಶೇಖರ, ಕೋನಸಾಗರ ಶುಕಮುನಿ ಬಂಡಿ, ಶಿವಪ್ಪ ಗಾದಾರಿ, ಅಮರೇಶ ತಳಗೇರಿ, ಸತ್ಯನಾರಾಯಣ ಕಂದಗಲ್, ಚಂದ್ರಶೇಖರ ಕೇಲೂರು, ಮಲ್ಲಯ್ಯ ಬಸಾಪುರ, ಮಲ್ಲಿಕಾರ್ಜುನ ಸಾಸ್ವಿಹಾಳ, ಚನ್ನಪ್ಪ ಸಜ್ಜನ ತಾವರಗೇರಿ, ಬಸವರಾಜ ಬೋದೂರು, ಶಂಶುದ್ದೀನ್ ಕೇಸೂರು ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಗ್ರಾಮ ಪಂಚಾಯತ, ಗ್ರಾಮ ಸಭೆ ಹಾಗೂ ಗ್ರಾಮ ಆರೋಗ್ಯ, ನೈರ್ಮಲ್ಯ ಮತ್ತು ಪೌಷ್ಟಿಕಾಹಾರ ಸಮಿತಿ ಸಭೆ: ಕಲ್ಲೂರು.

❑ ನೈಜ್ಯ ದೆಸೆ ನ್ಯೂಸ್

**ಕಲ್ಲೂರು: ಗ್ರಾಮ ಪಂಚಾಯಿತ ವ್ಯಾಪ್ತಿಯಲ್ಲಿ ಗ್ರಾಮ ಸಭೆ ಹಾಗೂ ಗ್ರಾಮ ಆರೋಗ್ಯ, ನೈರ್ಮಲ್ಯ ಮತ್ತು ಪೌಷ್ಟಿಕತೆ ಸಮಿತಿ ಸಭೆ ಹಮ್ಮಿಕೊಂಡು, ಸಮಿತಿಯ ಪ್ರಮುಖ ಉದ್ದೇಶ ಮತ್ತು ಜವಾಬ್ದಾರಿಗಳಡಿ ತಾಯಿ?ಮಗು, ಕಿಶೋರ?ಕಿಶೋರಿಯರು, ವಯಸ್ಕರು ಹಾಗೂ ಗರ್ಭಿಣಿಯರು ಸೇರಿದಂತೆ ವಿವಿಧ ವಯೋಮಾನದವರ ಆರೋಗ್ಯಕ್ಕೆ ಸಂಬಂಧಿಸಿದ ಪ್ರಮುಖ ವಿಷಯಗಳ ಕುರಿತು ಸಮಗ್ರವಾಗಿ ಚರ್ಚಿಸಲಾಯಿತು.**

ಸವಿ ಉದ್ದೇಶ ಮತ್ತು ರಚನೆಯ ಹಿನ್ನೆಲೆ: ಗ್ರಾಮ ಮಟ್ಟದಲ್ಲಿ ಸಮುದಾಯದ ಸಹಭಾಗಿತ್ವದ ಮೂಲಕ ಆರೋಗ್ಯ, ನೈರ್ಮಲ್ಯ ಮತ್ತು ಪೌಷ್ಟಿಕ ಸೇವೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಉದ್ದೇಶದಿಂದ ರಚಿಸಲಾಗಿದೆ. ಇದು ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ ಅಡಿಯಲ್ಲಿ 2005ಬರಿಂದ ಸಮುದಾಯ ಆಧಾರಿತ ಆರೋಗ್ಯ ಯೋಜನೆ ಮತ್ತು ಮೇಲ್ವಿಚಾರಣೆಯ



ಪ್ರಮುಖ ವ್ಯವಸ್ಥೆಯಾಗಿ ಜಾರಿಯಲ್ಲಿದೆ.

ಸಮಿತಿಯ ಪ್ರಮುಖ ಉದ್ದೇಶಗಳು ಗ್ರಾಮದಲ್ಲಿನ ಆರೋಗ್ಯ, ಸ್ವಚ್ಛತೆ ಮತ್ತು ಪೌಷ್ಟಿಕತಾ ಸಮಸ್ಯೆಗಳನ್ನು ಗುರುತಿಸುವುದು, ಸ್ಥಳೀಯ ಮಟ್ಟದಲ್ಲಿ ಪರಿಹಾರ ಕಂಡುಕೊಳ್ಳುವುದು, ಸರ್ಕಾರಿ ಆರೋಗ್ಯ ಸೇವೆಗಳ ಕುರಿತು ಅರಿವು ಮೂಡಿಸುವುದು ಹಾಗೂ ಆರೋಗ್ಯ ಇಲಾಖೆ ಮತ್ತು ಗ್ರಾಮ ಪಂಚಾಯಿತಿಯೊಂದಿಗೆ ಸಮನ್ವಯ ಸಾಧಿಸುವುದಾಗಿದೆ. ವಿವಿಧ ವಯೋಮಾನದವರ ಆರೋಗ್ಯಕ್ಕೆ ಆದ್ಯತೆ ಹಾಗೂ ಸಭೆಯಲ್ಲಿ ಗರ್ಭಿಣಿಯರು ಬಾಣಂತಿಯರು, ನವಜಾತ ಶಿಶುಗಳು, ಮಕ್ಕಳು, ಕಿಶೋರ ಕಿಶೋರಿಯರು ಹಾಗೂ ವಯಸ್ಕರ ಆರೋಗ್ಯದ ಕುರಿತು ವಿಶೇಷವಾಗಿ ಚರ್ಚಿಸಲಾಯಿತು. ಗರ್ಭಿಣಿಯರು: ನಿಯಮಿತ ತಪಾಸಣೆ, ಸಂಸ್ಥಾ ಪ್ರಸವ, ಪೌಷ್ಟಿಕ ಆಹಾರ, ರಕ್ತಹೀನತೆ ತಡೆ ಹಾಗೂ ಹೆರಿಗೆ ನಂತರದ ಆರೈಕೆ. – ಮಕ್ಕಳು: ಸಂಪೂರ್ಣ ಲಸಿಕಾಕರಣ, ಬೆಳವಣಿಗೆ ಮೇಲ್ವಿಚಾರಣೆ, ಪೌಷ್ಟಿಕತೆ ಹಾಗೂ ಬಾಲ್ಯ ರೋಗಗಳ ತಡೆ. ಕಿಶೋರ-ಕಿಶೋರಿಯರು: ಪೌಷ್ಟಿಕತೆ, ರಕ್ತಹೀನತೆ ತಡೆ, ವೈಯಕ್ತಿಕ ಸ್ವಚ್ಛತೆ, ಮಾನಸಿಕ ಹಾಗೂ ಸಂತಾನೋತ್ಪತ್ತಿ ಆರೋಗ್ಯದ ಕುರಿತು ಆರೋಗ್ಯ ಅರಿವು. ವಯಸ್ಕರು: ಸಾಂಕ್ರಾಮಿಕವಲ್ಲದ ರೋಗಗಳಾದ ಮಧುಮೇಹ, ರಕ್ತದೊತ್ತಡ ಸೇರಿದಂತೆ ಅಗತ್ಯ ಆರೋಗ್ಯ ತಪಾಸಣೆ ಹಾಗೂ ಆರೋಗ್ಯಕರ ಜೀವನಶೈಲಿಯ ಕುರಿತು ಜಾಗೃತಿ. ಕುಟುಂಬ ಮತ್ತು ಸಮುದಾಯ: ಸುರಕ್ಷಿತ ಕುಡಿಯುವ ನೀರು, ವೈಯಕ್ತಿಕ ಸ್ವಚ್ಛತೆ, ಸುತ್ತಮುತ್ತಲಿನ ಸ್ವಚ್ಛತೆ ಹಾಗೂ ಪೌಷ್ಟಿಕ ಆಹಾರದ ಮಹತ್ವದ ಕುರಿತು ಅರಿವು ಮೂಡಿಸಲಾಯಿತು. ಗ್ರಾಮದಲ್ಲಿರುವ ಅರ್ಹ ಫಲಾನುಭವಿಗಳನ್ನು ಸರ್ಕಾರಿ ಆರೋಗ್ಯ ಮತ್ತು ಪೌಷ್ಟಿಕತಾ ಸೇವೆಗಳಿಗೆ ಸಂಪರ್ಕಿಸುವಲ್ಲಿ ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಪಿಹೆಚ್‌ಸಿಓ ಹಾಗೂ ಸಮಿತಿ ಸದಸ್ಯರು ಸಮನ್ವಯದಿಂದ ಕಾರ್ಯನಿರ್ವಹಿಸುವಂತೆ ಒತ್ತು ನೀಡಲಾಯಿತು. ಸಮಿತಿಯ ಸಭೆಗಳನ್ನು ನಿಯಮಿತವಾಗಿ ನಡೆಸಿ, ಸಭೆಯ ಚರ್ಚೆಗಳು, ನಿರ್ಣಯಗಳು ಹಾಗೂ ಕೈಗೊಂಡ ಕ್ರಮಗಳನ್ನು ಸಮರ್ಪಕವಾಗಿ ದಾಖಲಿಸುವಂತೆ ಸಮಿತಿ ಸದಸ್ಯರಿಗೆ ಸೂಚಿಸಲಾಯಿತು. ಸಭೆಯಲ್ಲಿ ಕಲ್ಲೂರು ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ ಸಂಗಮೇಶ್, ಬಸವರಾಜಪ್ಪಗೌಡ, ಜಿಲ್ಲಾ ಕಾರ್ಯಕ್ರಮ ಸಂಯೋಜಕರು -ಸಮುದಾಯ ಮೇಲ್ವಿಚಾರಣೆ ಲಕ್ಷ್ಮೀಕಾಂತ ರೆಡ್ಡಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಿರಿಯ ಪಿಹೆಚ್‌ಸಿಓ ಮಂಜುಳಾ ಶುಕ್ಲಾ, ಹಾಗೂ ಪಿಹೆಚ್‌ಸಿಓ, ಆಶಾ ಅಂಗನವಾಡಿ ಕಾರ್ಯಕರ್ತೆಯರು ಸಮಿತಿ ಸದಸ್ಯರು, ಗ್ರಾಮ ಪಂಚಾಯಿತಿ ಪ್ರತಿನಿಧಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ನೇಮಕಾತಿ ಪ್ರಕಟಣೆ

**KEA ನೇಮಕಾತಿ 2026 233 ಫಾರ್ಮಸಿ ಆಫೀಸರ್ ಮತ್ತು ನರ್ಸಿಂಗ್ ಆಫೀಸರ್ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಆಗಸ್ಟ್ 7, 2026**

KEA ನೇಮಕಾತಿ 2026: 233 ಫಾರ್ಮಸಿ ಆಫೀಸರ್ ಮತ್ತು ನರ್ಸಿಂಗ್ ಆಫೀಸರ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕರ್ನಾಟಕ ಪರೀಕ್ಷಾ ಪ್ರಾಧಿಕಾರವು (KEA) ಆಗಸ್ಟ್ 2026ರ ಅಧಿಕೃತ ಅಧಿಸೂಚನೆಯ ಮೂಲಕ ಫಾರ್ಮಸಿ ಆಫೀಸರ್ ಮತ್ತು ನರ್ಸಿಂಗ್ ಆಫೀಸರ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕರ್ನಾಟಕ ಸರ್ಕಾರದಲ್ಲಿ ಉದ್ಯೋಗವನ್ನು ಬಯಸುವವರು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 30–ಆಗಸ್ಟ್–2026 ರೊಳಗೆ ಅಥವಾ ಅಂ–ದು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಅಧಿಕೃತ ವೆಬ್‌ಸೈಟ್: cetonline.karnataka.gov.in

## ಜಗದೀಶ್ ಪೂಜಾರ್ ರವರಿಗೆ ಭಾರತ ಭೂಷಣ ರಾಷ್ಟ್ರೀಯ ಪ್ರಶಸ್ತಿ

❑ ನೈಜ್ಯ ದೆಸೆ ನ್ಯೂಸ್



ಬಳ್ಳಾರಿ / ಕಂಪ್ಲಿ : ತಾಲೂಕಿನ ಕಣ್ವಿತಿಮ್ಮಲಾಪುರ ಗ್ರಾಮದ ಜಗದೀಶ್ ಪೂಜಾರ್ ಇವರು ಸಾಮಾಜಿಕ ಕ್ಷೇತ್ರದಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ಹಲವಾರು ಸಮಾಜ ಮುಖಿ ಕಾರ್ಯಗಳಾದ ಗ್ರಾಮೀಣ ಕ್ರೀಡಾ ಕೂಟ, ಸ್ವಚ್ಛತಾ ಅಭಿಯಾನ, ಸಹಾಸ ಕ್ರೀಡೆಗಳು, ಪಲ್ಸ್ ಪೋಲಿಯೊ, ಆರೋಗ್ಯ ಜಾಗೃತಿ ಬೀದಿ ನಾಟಕ, ರಕ್ತದಾನ ಶಿಬಿರ, ಯುವ ಜನರಲ್ಲಿ ನಾಯಕತ್ವ ಗುಣ ಬೆಳೆಸುವುದು ಇನ್ನೂ ಅನೇಕ ಕಾರ್ಯಗಳನ್ನು ಗುರುತಿಸಿ ಇವರ ಅನುಪಮ ಸೇವೆಗಾಗಿ ಕಾವ್ಯಶ್ರೀ ಚಾರಿಟಬಲ್ ಟ್ರಸ್ಟ್ (ರಿ) ಬೆಂಗಳೂರು ಇವರು 23ನೇ ಆಗಸ್ಟ್ ಭಾನುವಾರದಂದು ಬೆಂಗಳೂರಿನ ಕನ್ನಡ ಸಾಹಿತ್ಯ ಪರಿಷತ್ತಿನ ಅಕ್ಕ ಮಹಾದೇವಿ ಸಭಾಂಗಣದಲ್ಲಿ ಭಾರತ ಭೂಷಣ ರಾಷ್ಟ್ರೀಯ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುವುದು. ಎಂದು ಚಾರಿಟಬಲ್ ಟ್ರಸ್ಟ್ ನ ರಾಜ್ಯಾಧ್ಯಕ್ಷರಾದ ಅಲ್ಲೈ ರೊ.ಡಾ.ಜಿ ಶಿವಣ್ಣ ಇವರು ತಿಳಿಸಿದ್ದಾರೆ. ಇವರಿಗೆ ಸಂದ ಪ್ರಶಸ್ತಿಗಳು: ರಾಜ್ಯ ಸದ್ಭಾವನ ಪ್ರಶಸ್ತಿ ಬಸವಶ್ರೀ ರಾಷ್ಟ್ರೀಯ ಪ್ರಶಸ್ತಿ ಸಮಾಜ ಸೇವಾ ಭಾರ್ಗವ ಪ್ರಶಸ್ತಿ ಪ್ರಸ್ತುತ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಕಣ್ವಿತಿಮ್ಮಲಾಪುರ ಗ್ರಾಮದಲ್ಲಿ ಅತೀಥಿ ಶಿಕ್ಷಕರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.

1ನೇ ಪುಟದಿಂದ....

ಒಂದಾಗಿ ಗುರುತಿಸಿಕೊಂಡಿದೆ" ಎಂದು ಹೇಳಿದರು. "15ನೇ ಹಣಕಾಸು ಆಯೋಗದ ಅವಧಿಯಲ್ಲಿ ವಿಭಜಿಸಬಹುದಾದ ತೆ–ರಿಗೆ ಭಾಗದಲ್ಲಿ ಕರ್ನಾಟಕದ ಪಾಲು ಶೇ.4.7ರಿಂದ ಶೇ.3.6ಕ್ಕೆ ಇಳಿಕೆಯಾಯಿತು. ಇದು ಸುಮಾರು ಶೇ.23ರಷ್ಟು ಕಡಿತವಾಗಿದ್ದು, ಆರು ವರ್ಷಗಳ ಅವಧಿಯಲ್ಲಿ ರಾಜ್ಯಕ್ಕೆ ಅಂದಾಜು ರೂ.65,000 ಕೋಟಿಯಷ್ಟು ನಷ್ಟ ಉಂಟಾಗಿದೆ. 15ನೇ ಹಣಕಾಸು ಆಯೋಗವು ಕರ್ನಾಟಕಕ್ಕೆ ರೂ.5,495 ಕೋಟಿ ವಿಶೇಷ ಅನುದಾನ ಮತ್ತು ರೂ.6,000 ಕೋಟಿ ರಾಜ್ಯ–ನಿದಿ ಷ್ಟ ಅನುದಾನವನ್ನು ಶಿಫಾರಸು ಮಾಡಿತ್ತು. ಆದರೆ, ಈ ಎರಡೂ ಶಿಫಾರಸು ಮಾಡಿದ ಅನುದಾನಗಳು ಬಿಡುಗಡೆಯಾಗಿಲ್ಲ" ಎಂದು ಆಗಿರುವ ಅನ್ಯಾಯ ವಿವರಿಸಿದರು.

"16ನೇ ಹಣಕಾಸು ಆಯೋಗವು ನಮ್ಮ ರಾಜ್ಯಕ್ಕೆ ಭಾಗಶಃ ನ್ಯಾಯ ಒದಗಿಸಿದ್ದು, ಕರ್ನಾಟಕದ ಪಾಲನ್ನು ಶೇ.3.64ರಿಂದ ಶೇ.4.131ಕ್ಕೆ ಹೆಚ್ಚಿಸುವ ಮೂಲಕ ಕೆಲವು ಮಟ್ಟಿಗೆ ಮರುಸ್ಥಾಪಿಸಿದೆ. ಆದಾಗ್ಯೂ, ನಮ್ಮ ಪಾಲನ್ನು ಸಂಪೂರ್ಣವಾಗಿ ಶೇ.4.7ಕ್ಕೆ ನಿಲ್ಲಿಸಬೇಕಿದೆ. ಕರ್ನಾಟಕವು ಜಿಎಸ್‌ಟಿ ಮತ್ತು ಆದಾಯ ತೆರಿಗೆಗೆ ಎರಡನೇ ಅತಿ ದೊಡ್ಡ ಕೊಡುಗೆ ನೀಡುವ ರಾಜ್ಯವಾಗಿದೆ. ಬೆಳವಣಿಗೆ ಮತ್ತು ಆದ–ಾಯದ ವಿಷಯದಲ್ಲಿ ಉತ್ತಮ ಸಾಧನೆ ಮಾಡುವ ರಾಜ್ಯವನ್ನು ಪ್ರೋತ್ಸಾಹಿಸಬೇಕೇ ಹೊರತು, ದಂಡಿಸಬಾರದು" ಎಂದರು. ರಾಜ್ಯಗಳ ಪಾಲು ಅಂತಿಮಗೊಂಡಿರುವ ಸಂದರ್ಭದಲ್ಲಿ, ಬೆಂಗಳೂರು–ಮುಂಬೈ ಹೈಸ್ಪೀಡ್ ರೈಲು ಯೋಜನೆ, ಖಖಖಖ ದಕ್ಷಿಣ ಭಾಗ, ರಾಯಚೂರಿಗೆ ಏಮ್ಸ್ ಹಾಗೂ ಕಲ್ಯಾಣ ಕರ್ನಾಟಕಕ್ಕೆ ವಿಶೇಷ ಪ್ಯಾಕೇಜ್‌ನಂತಹ ಹೆಚ್ಚುವರಿ ಕೇಂದ್ರ ಯೋಜನೆಗಳ ಮೂಲಕ ಕರ್ನಾಟಕಕ್ಕೆ ನ್ಯಾಯ ಒದಗಿಸಬೇಕು" ಎಂದು ಒತ್ತಾಯಿಸಿದರು. "ಇಡೀ ದಕ್ಷಿಣ ಭಾರತದ ಮತ್ತೊಂದು ಪ್ರಮುಖ ವಿಚಾರ ಎಂದರೆ ಲೋಕಸಭಾ ಕ್ಷೇತ್ರಗಳ ಪುನರ್ವಿಂಗಡಣೆ. ಯಾವುದೇ ದಕ್ಷಿಣ ರಾಜ್ಯ ತನ್ನ ಲೋಕಸಭಾ ಸ್ಥಾನಗಳನ್ನು ಕಳೆದುಕೊಳ್ಳುವುದಿಲ್ಲ ಎಂಬ ಭರವಸೆಯನ್ನು ನಾವು ಸ್ವಾಗತಿಸುತ್ತೇವೆ. ಆದರೆ, ಪ್ರಾತಿನಿಧ್ಯವೆಂದರೆ ಕೇವಲ ಸಂಖ್ಯೆಗಳ ವಿಷಯವಲ್ಲ. ಅದು ನಮ್ಮ ಪ್ರಭಾವ ಮತ್ತು ಧ್ವನಿಯ ವಿಷಯವೂ ಹೌದು. ದಕ್ಷಿಣ ಭಾರತವು ದೇಶದ ಕರೆಯನ್ನು ಸ್ವೀಕರಿಸಿ, ಜನಸಂಖ್ಯೆಯನ್ನು ಶಿಸ್ತುಬದ್ಧವಾಗಿ ನಿಯಂತ್ರಿಸುವಲ್ಲಿ ಯಶಸ್ವಿಯಾಗಿದೆ. ಯಶಸ್ಸೇ ನಮ್ಮ ಧ್ವನಿಯನ್ನು ದುರ್ಬಲಗೊಳಿಸಲು ಕಾರಣವಾಗಬಾರದು. ನಮ್ಮ ಆರ್ಥಿಕ ತೂಕಕ್ಕೆ ತಕ್ಕ ರಾಜಕೀಯ ಧ್ವನಿಯೂ ಇರಬೇಕು" ಎಂದು ವಾದಿಸಿದರು. "ನಮ್ಮ ಪ್ರಾತಿನಿಧ್ಯದ ಪಾಲನ್ನು ಸಂಖ್ಯಾತ್ಮಕವಾಗಿಯೂ ಅಥ–ವಾ ಅನುಪಾತದಲ್ಲಿಯೂ ಕಡಿಮೆ ಮಾಡಬಾರದು. ನಾನು ಹೇಳುತ್ತಿರುವ ಈ ನಿಲುವನ್ನು ಇಲ್ಲಿ ಉಪಸ್ಥಿತರಿರುವ ಎಲ್ಲ ಮುಖ್ಯಮಂತ್ರಿಗಳು ಬೆಂಬಲಿಸುತ್ತಾರೆ ಎಂಬ ವಿಶ್ವಾಸ ನನಗಿದೆ. 1971ರ ಜನಸಂಖ್ಯಾ ಆಧಾರವನ್ನು ಗೌರವಿಸಬೇಕು ಮತ್ತು ನಮ್ಮ ಧ್ವನಿಯ ಬಲವನ್ನು ಸಂರಕ್ಷಿಸಬೇಕು" ಎಂದು ಒತ್ತಾಯಿಸಿದರು.

# ಮನೆಯಲ್ಲಿ ಆಹಾರ ಸಿದ್ದಪಡಿಸುವಾಗ ವಹಿಸುವ ಕಾಳಜಿಯನ್ನು ವಸತಿ ನಿಲಯದಲ್ಲಿಯೂ ವಹಿಸಿ:

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು; ಕುಟುಂಬದ ಸದಸ್ಯರಿಗೆ ಮನೆಯಲ್ಲಿ ಆಹಾರ ತಯಾರಿಸುವಾಗ ವಹಿಸುವ ಕಾಳ–ಜಿಯನ್ನು ವಹಿಸುವ ಮೂಲಕ ಆಹಾರ ಕಲುಷಿತವಾದಾಗ ಅಥವಾ ಕುಡಿಯುವ ನೀರು ಕಲುಷಿತವಾದಾಗ ಉಂಟಾಗುವ ಸಾಂಕ್ರಾಮಿಕ ರೋಗಗಳನ್ನು ತಡೆಯಲು ಸಾಧ್ಯವಾಗುವುದು ಎಂದು ಹಿರಿಯ ಆರೋಗ್ಯ ನೀರಿಕ್ಷಣಾಧಿಕಾರಿ ಸಂಗನಗೌಡ ಮಾಲಿಪಾಟೀಲ್ ತಿಳಿಸಿದರು.**

ಜಿಲ್ಲಾಧಿಕಾರಿಗಳು ರಾಯಚೂರು ರವರ ನಿರ್ದೇಶನದಂತೆ ಆರೋಗ್ಯ ಇಲಾಖೆಯ ವೈದ್ಯಕೀಯ ತಂಡ ವಸತಿ ನಿಲಯ, ವಸತಿ ಶಾಲೆಗಳಿಗೆ ಬೇಟಿ ನೀಡುವ ಭಾಗವಾಗಿ ಅಂಭಾಮಠದ ಅಂಬಾದೇವಿ ಬಾಲಕಿಂ–ಯರ ವಸತಿ ನಿಲಯ ಹಾಗೂ ಡಿ ದೇವರಾಜ್ ಅರಸು ಮೇಟ್ರೀಕ್ ಪೂರ್ವ ಬಾಲಕರ ವಸತಿ



ನಿಲಯಗಳಿಗೆ ಬೇಟಿ ಆರೋಗ್ಯ ಜಾಗೃತಿ ನೀಡಿ ಮಾತನಾಡುತ್ತಾ, ಅಡುಗೆ ತಯಾರಿಸುವ ಎಲ್ಲ ಸಿಬ್ಬಂದಿಯವರು ಆಹಾರ ಪದಾರ್ಥಗಳ ಸ್ವಚ್ಛಗೊಳಿಸಿದ ನಂತರ ಅಡುಗೆ ಮಾಡಿ ಮಕ್ಕಳಿಗೆ ಊಣ ಬಡಿಸುವ ತನಕ ನಿಗಾವಹಿಸಬೇಕು. ಮುಖ್ಯವಾಗಿ ಅಡುಗೆಯವರು ನಿಯಮಿತವಾಗಿ ಆರೋಗ್ಯ ಪರೀಕ್ಷೆ ಮಾಡಿಸಬೇಕು. ತಲೆಗೆ ಕ್ಯಾಪ್, ಎಪ್ರಾನ್ ಧರಿಸಲು, ಉಗುರು ಸ್ವಚ್ಚವಾಗಿಟ್ಟುಕೊಳ್ಳಲು ತಿಳಿಸಿದರು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ ಮಾತನಾಡಿ, ವಸತಿ ನಿಲಯಗಳಲ್ಲಿಯ ನೀರಿನ ಸಂಪು ನೀರು ಸಂಗ್ರಹಕಗಳ ಒಳಭಾಗವನ್ನು ನಿಯಮಾನುಸಾರ ಸ್ವಚ್ಛಗೊಳಿಸಬೇಕು, ಆಹಾರ ಪದಾರ್ಥಗಳ ದಾಸ್ತಾನು ಕೊಠಡಿಯಲ್ಲಿ ನೆಲದಲ್ಲಿ ಕಾಯಿಪಲ್ಯೆ ಹಾಕದಂತೆ, ಧವಸ, ದಾನ್ಯಗಳಲ್ಲಿ ಇಲಿ ಇತರೆ ಕೀಟಗಳು ಬರದಂತೆ ನಿಗಾವಹಿಸಬೇಕು. ಅಡುಗೆ ಪಾತ್ರೆ, ಸಾಮಗ್ರಿಗಳ ಸ್ವಚ್ಛತೆ ಕೈಗೊಳ್ಳುವ ಸ್ಥಳದಲ್ಲಿ ಸರಾಗವಾಗಿ ನೀರು ಹರಿದು ಹೋಗುವುದನ್ನು ಖಾತ್ರಿ ಮಾಡಿಕೊಳ್ಳಬೇಕು. ಆಹಾರ ಸಿದ್ದಪಡಿಸುವ ಪೂರ್ವ ಕೈಗಳನ್ನು ತೊಳೆದುಕೊಳ್ಳಬೇಕು. ಆಹಾರ ಸೇವಿಸುವ ಪೂರ್ವದಲ್ಲಿ ಹಾಗೂ ಶೌಚದ ನಂತರ ಕೈಗಳನ್ನು ಸಾಬೂನು ಮತ್ತು ನೀರಿನಿಂದ ಚೆನ್ನಾಗಿ ತೊಳೆದುಕೊಳ್ಳುವುದನ್ನು ಮರೆಯಬಾರದು, ವೈಯಕ್ತಿಕ ಸ್ವಚ್ಚತೆಯನ್ನು ಬಿಸಿಯಾದ ಆಹಾರ ಸೇವಿಸಲು ವಿದ್ಯಾರ್ಥಿಗಳಲ್ಲಿ ವಿನಂತಿಸಿದರು.

ಈ ಸಂದರ್ಭದಲ್ಲಿ ಮುಖ್ಯಗುರುಗಳಾದ ಮೆಹಬೂಬ್ ಖಾನ್, ವಾರ್ಡನ್ ನಾಗರತ್ನ, ಸಹ ಶಿಕ್ಷಕರಾದ ಅಂಬಣ್ಣ, ರಶೀನಾ, ಸೈಜಾದಿ ಬೇಗಂ, ಜ್ಯೋತಿ, ರಂಗಮ್ಮ, ನಂದಿನಿ, ಶ್ರೀದೇವಿ ಹಾಗೂ ಅಡುಗೆ ಸಿಬ್ಬಂದಿಯವರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಶಾಲಾ ಸಮಯಕ್ಕೆ ಬಸ್‌ಗಳಿಲ್ಲ ವಿದ್ಯಾರ್ಥಿಗಳ ಪರದಾಟ

❑ ನೈಜ್ಯ ದೆಸೆ ನ್ಯೂಸ್

**ಕುಷ್ಟಗಿ: ಗ್ರಾಮೀಣ ಪ್ರದೇಶಗಳಿಂದ ಪಟ್ಟಣದ ಶಾಲಾ–ಕಾಲೇಜುಗಳಿಗೆ ನಿತ್ಯ ಸಂಚ–ರಿಸುವ ವಿದ್ಯಾರ್ಥಿಗಳಿಗೆ ಸಮರ್ಪಕ ಸಾರಿಗೆ ವ್ಯವಸ್ಥೆ ಕಲ್ಪಿಸುವಂತೆ ಆಗ್ರಹಿಸಿ ಮೆಣಸಗೇರಾ, ಕಡೇಕೊಪ್ಪ, ದೋಟಿಹಾಳ ಹಾಗೂ ಸುತ್ತಲಿನ ಗ್ರಾಮಗಳ ವಿದ್ಯಾರ್ಥಿಗಳು ಬುಧವಾರ ಕುಷ್ಟಗಿ ಕಲ್ಯಾಣ ಕರ್ನಾಟಕ ಸಾರಿಗೆ ಬಸ್ ಡಿಪೋ ಎದುರು ಪ್ರತಿಭಟನೆ ನಡೆಸಿದರು.**

ಮೆಣಸಗೇರಾ, ಕಡೇಕೊಪ್ಪ, ದೋಟಿಹಾಳ ಸೇರಿದಂತೆ ವಿವಿಧ ಗ್ರಾಮಗಳಿಂದ ಪ್ರತಿದಿನ 150ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪಟ್ಟಣಕ್ಕೆ ಆಗಮಿಸುತ್ತಿದ್ದಾರೆ. ಆದ–ರೆ, ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಬಸ್‌ಗಳ ವ್ಯವಸ್ಥೆ ಇಲ್ಲದಿರುವುದರಿಂದ ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ ಎಂದು ಪ್ರತಿಭಟನಾಕಾರರು ದೂರಿದರು. ಶಾಲಾ–ಕಾಲೇಜುಗಳ ಆರಂಭದ ಸಮಯಕ್ಕೆ ಬಸ್‌ಗಳ ಸಂಚಾರ ಹೊಂದಿಕೆಯಾಗುತ್ತಿಲ್ಲ. ಬೆಳಿಗ್ಗೆ 8ರಿಂದ 9 ಗಂಟೆಯೊಳಗೆ ಹೆಚ್ಚಿನ ಬಸ್‌ಗಳ ಅಗತ್ಯವಿದ್ದರೂ, ಇರುವ ಬಸ್‌ಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗಿರುವುದ–ರಿಂದ ಎಲ್ಲರಿಗೂ ಆಸನ ಸಿಗುತ್ತಿಲ್ಲ. ಕೆಲವರು ಬಸ್‌ನ ಮೆಟ್ಟಿಲು ಹಾಗೂ ಬಾಗಿಲಿನ ಬಳಿ ನಿಂತುಕೊಂಡೇ ಪ್ರಯಾಣಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದ್ದು, ಇದು ವಿದ್ಯಾರ್ಥಿಗಳ ಸುರಕ್ಷತೆಗೆ ಆತಂಕಕಾ–ರಿಯಾಗಿದೆ ಎಂದು ಹೇಳಿದರು.

ಅದೇ ರೀತಿ ತರಗತಿಗಳು ಮುಗಿದ ಬಳಿಕ ಗ್ರಾಮಗಳಿಗೆ ಮರಳಲು ಸೂಕ್ತ ಸಮಯದಲ್ಲಿ ಬಸ್‌ಗಳು ಸಿಗದೆ ವಿದ್ಯಾರ್ಥಿಗಳು ಡಿಪೋ ಹಾಗೂ ಪ್ರಮುಖ ಬಸ್ ನಿಲ್ದಾಣಗಳಲ್ಲಿ ಗಂಟೆಗಟ್ಟಲೆ ಕಾಯಬೇಕಾಗಿದೆ. ವಿಶೇಷವಾಗಿ ವಿದ್ಯಾರ್ಥಿನಿಯರು ಸಂಜೆ ವೇಳೆ ಬಸ್‌ಗಾಗಿ ಕಾಯಬೇಕಾಗಿರುವುದು ಪೋಷಕರಲ್ಲಿ ಆತಂಕ ಮೂಡಿಸಿದೆ ಎಂದು ತಿಳಿಸಿದರು. ಹೀಗಾಗಿ ಬೆಳಿಗ್ಗೆ ಹಾಗೂ ಸಂಜೆ ಶಾಲಾ–ಕಾಲೇಜುಗಳ ವೇಳೆಗೆ ಅನುಗುಣವಾಗಿ ತಲಾ ಎರಡು ಹೆಚ್ಚುವರಿ ಬಸ್‌ಗಳನ್ನು ವ್ಯವಸ್ಥೆ ಮಾಡಬೇಕು. ವಿದ್ಯಾರ್ಥಿಗಳ ಸಂಖ್ಯೆಯನ್ನು ಆಧರಿಸಿ ಹೆಚ್ಚುವರಿ ಟ್ರಿಪ್‌ಗಳನ್ನು



ಆರಂಭಿಸಬೇಕು ಎಂದು ಆಗ್ರಹಿಸಿದರು.

ಪಿಎಸ್‌ಐ ಹನುಮಂತಪ್ಪ ತಳವಾರ ಸ್ಥಳಕ್ಕೆ ಆಗಮಿಸಿ ವಿದ್ಯಾರ್ಥಿಗಳ ಸಮಸ್ಯೆ ಆಲಿಸಿದರು. ಬಳಿಕ ಸಾರಿಗೆ ಡಿಪೋ ವ್ಯವಸ್ಥಾಪಕರನ್ನು ಸ್ಥಳಕ್ಕೆ ಕರೆಸಿ ವಿದ್ಯಾರ್ಥಿಗಳ ಬೇಡಿಕೆಗಳ ಕುರಿತು ಚರ್ಚೆ ನಡೆಸಿದರು. ಸಾರಿಗೆ ಘಟಕದ ವ್ಯವಸ್ಥಾಪಕ ಶಿವಶಂಕರಗೌಡ ಪಾಟೀಲ ಮಾತನಾಡಿ, ಮೆಣಸಗೇರಾ, ಕಡೇಕೊಪ್ಪ ಹಾಗೂ ದೋಟಿಹಾಳ ಮಾರ್ಗದಲ್ಲಿ ಈಗಾಗಲೇ ಬಸ್‌ಗಳ ಸಂಚಾರವಿದೆ. ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಹೆಚ್ಚುವರಿ ಬಸ್‌ಗಳ ಬೇಡಿಕೆ ಸಲ್ಲಿಸಿರುವುದು ಗಮನಕ್ಕೆ ಬಂದಿದೆ. ಈ ಕುರಿತು ಮೇಲಧಿಕಾ–ರಿಗಳೊಂದಿಗೆ ಚರ್ಚಿಸಿ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು. ಸಂಚಾರಿ ನಿಯಂತ್ರಕ ಜೈಪ್ರಕಾಶ ಹಡಪದ, ಕಡೇಕೊಪ್ಪ ಗ್ರಾಮದ ಮುಖಂಡರಾದ ಮಲ್ಲಿಕಾರ್ಜುನಗೌಡ ಪಾಟೀಲ, ವೀರೇಶ ನಿಡಗುಂದಿಮಠ ಸೇರಿದಂತೆ ವಿದ್ಯಾರ್ಥಿಗಳು ಪ್ರತಿಭಟನೆಯಲ್ಲಿ ಉಪಸ್ಥಿತರಿದ್ದರು.

# ಮಹಿಳೆಯರು ಮಾನಸಿಕ ಖಿನ್ನತೆಗೆ ಒಳಗಾಗಬಾರದು: ಗೀತಾ ಹಿರೇಮಠ

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಇಂದಿನ ದಿನಗಳಲ್ಲಿ ಮಹಿಳೆಯರು ಪುರುಷರಿಗೆ ಸರಿಸಮಾನವಾಗಿ ಎಲ್ಲ ಕ್ಷೇತ್ರಗಳಲ್ಲೂ ಸಾಧನೆ ಮಾಡುತ್ತಿದ್ದು, ಹಿಂದಿನ ಕಾಲಕ್ಕೆ ಹೋಲಿಸಿದರೆ ಮಹಿಳೆಯರಿಗೆ ಸಮಾಜದಲ್ಲಿ ಹೆಚ್ಚಿನ ಗೌರವ ಮತ್ತು ಅವಕಾಶಗಳು ದೊರೆಯುತ್ತಿವೆ ಎಂದು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಗೀತಾ ಹಿರೇಮಠ ಹೇಳಿದರು.**

ನಗರದ ಶಾರದಾ ಮಹಿಳಾ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಗುರುವಾರ ಜಿಲ್ಲಾ ಹಾಗೂ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಸಹನಾ ಮಕ್ಕಳ ಆಸ್ಪತ್ರೆ, ದಿವಂಗತ ವೀರನಗೌಡ ಗುಂಜಳ್ಳಿ, ದಿವಂಗತ ಈಡುಪುಗಂಟಿ ಲಕ್ಷ್ಮಿನರಸಮ್ಮ ವೆಂಕಟರತ್ನ ಹಾಗೂ ದಿವಂಗತ ವೀರಬಸಪ್ಪ ಮಡಿವಾಳ ಕುಬಸದ ಸಿಂಧನೂರು ಅವರ 2026ನೇ ಸಾಲಿನ ದತ್ತಿ ಉಪನ್ಯಾಸ ಮಾಲಿಕೆಯ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ "ಮಹಿಳೆಯರ ಸ್ಥಿತಿಗತಿ, ಆರೋಗ್ಯ, ಬಂಜೆತನ ಹಾಗೂ ಮಹಿಳಾ ಶಿಕ್ಷಣದ ಸ್ಥಿತಿಗತಿ ಮತ್ತು ಹಕ್ಕುಗಳು" ವಿಷಯ ಕುರಿತು ಅವರು ಮಾತನಾಡಿದರು.

ಮಹಿಳೆಯರು ಇತ್ತೀಚಿನ ದಿನಗಳಲ್ಲಿ ವಿವಿಧ ಕಾರಣಗಳಿಂದ ಮಾನಸಿಕ ಒತ್ತಡ ಹಾಗೂ ಖಿನ್ನತೆಗೆ ಒಳಗಾಗುತ್ತಿದ್ದಾರೆ. ಆದ್ದರಿಂದ ಮಹಿಳೆಯರು ಧೈರ್ಯದಿಂದ ದೈಹಿಕವಾಗಿ, ಆರ್ಥಿಕವಾಗಿ ಹಾಗೂ ಮಾನಸಿಕವಾಗಿ ಸದೃಢರಾಗಬೇಕು. ಮಹಿಳಾ ಸಬಲೀಕರಣಕ್ಕಾಗಿ ಸರ್ಕಾರ ವಿವಿಧ ಯೋಜನೆಗಳು ಮತ್ತು ಮೀಸಲಾತಿ ಸೌಲಭ್ಯಗಳನ್ನು ಜಾರಿಗೊಳಿಸಿದೆ. ಕಾನೂನಿನ ಮೂಲಕ ಮಹಿಳೆಯರಿಗೆ ಸಮಾನತೆ ಮತ್ತು ವಿವಿಧ ಹಕ್ಕುಗಳನ್ನು ಕಲ್ಪಿಸಲಾಗಿದೆ ಎಂದರು. ಅಂಗನವಾಡಿಗಳ ಮೂಲಕ ಅಪೌಷ್ಟಿಕತೆ ನಿವಾರಣೆಗೆ ಪೌಷ್ಟಿಕ ಆಹಾರ ವಿತರಣೆ, ಶಕ್ತಿ, ಗೃಹಲಕ್ಷ್ಮಿ,



ಉದ್ಯೋಗಿನಿ ಸೇರಿದಂತೆ ವಿವಿಧ ಯೋಜನೆಗಳನ್ನು ಸರ್ಕಾರ ಜಾರಿಗೊಳಿಸಿದ್ದು, ಮಹಿಳೆಯರು ಅವುಗಳ ಸದುಪಯೋಗ ಪಡೆದುಕೊಂಡು ಸ್ವಾವಲಂಬಿ ಜೀವನ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಮಹಿಳೆಯರಿಗೆ ತಾಯ್ತನ ದೇವರು ನೀಡಿದ ವರವಾಗಿದೆ. ಬಂಜೆತನಕ್ಕೆ ಹಲವು ಕಾರಣಗಳಿರಬಹುದು. ವಯಸ್ಸು, ಅಂಡಾಣುಗಳಿಗೆ ಸಂಬಂಧಿಸಿದ ಸಮಸ್ಯೆಗಳು, ಹಾರ್ಮೋನ್ ಅಸಮತೋಲನ, ಅತಿಯಾದ ಒತ್ತಡ, ಮಾನಸಿಕ ಹಿಂಸೆ, ನಿದ್ರೆಯ ಕೊರತೆ ಹಾಗೂ ವಂಶಪಾರಂಪರ್ಯ ಸೇರಿದಂತೆ ವಿವಿಧ ಅಂಶಗಳು ಇದಕ್ಕೆ ಕಾರಣವಾಗಬಹುದು. ಆದ–ದ್ದರಿಂದ ಆರೋಗ್ಯದ ಬಗ್ಗೆ ಮಹಿಳೆಯರು ಸೂಕ್ತ ಕಾಳಜಿ ವಹಿಸಬೇಕು ಎಂದು ಹೇಳಿದರು.

ಕುಟುಂಬದಲ್ಲಿ ಹೆಣ್ಣು–ಗಂಡು ಎಂಬ ಭೇದಭಾವ ಮಾಡದೆ ಇಬ್ಬರನ್ನೂ ಸಮಾನವಾಗಿ ಕಾಣುವುದು ಅತ್ಯಂತ ಮುಖ್ಯ. ಪೋಷಕರು ಹೆಣ್ಣು ಮಕ್ಕಳಿಗೆ ಆತ್ಮವಿಶ್ವಾಸ, ಶಿಕ್ಷಣ ಮತ್ತು ಸಮಾನ ಅವಕಾಶಗಳನ್ನು ನೀಡಿದರೆ ಅವರಲ್ಲಿ ಆತ್ಮಸ್ಥೈರ್ಯ ಹೆಚ್ಚುತ್ತದೆ. ಈ ನಿಟ್ಟಿನಲ್ಲಿ ಪೋಷಕರ ಜವಾಬ್ದಾರಿ ಬಹಳಷ್ಟಿದೆ ಎಂದರು.

ಶಿಕ್ಷಣದ ಉದ್ದೇಶ ಜ್ಞಾನ ಸಂಪಾದನೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ತುರ್ವಿಹಾಳದ ಕನ್ನಡ ಉಪನ್ಯಾಸಕ ಮಹಾದೇವ ಗೋನ್ವಾರ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಉನ್ನತ ಶಿಕ್ಷಣ ಪಡೆಯುವಲ್ಲಿ ಮಹಿಳೆಯರ ಪಾತ್ರ ಹೆಚ್ಚುತ್ತಿದೆ. ಆದರೆ ಶಿಕ್ಷಣದ ಮೂಲ ಉದ್ದೇಶ ಕೇವಲ ಹೆಚ್ಚು ಅಂಕ ಗಳಿಸುವುದು, ಉದ್ಯೋಗ ಪಡೆಯುವುದು ಅಥವಾ ಐಷಾರಾಮಿ ಜೀವನ ನಡೆಸುವುದಲ್ಲ. ಜ್ಞಾನವನ್ನು ಸಂಪಾದಿಸಿ ಸಮಾಜದಲ್ಲಿ ಜವಾಬ್ದಾ–ರಿಯುತವಾಗಿ ಬದುಕುವ ತಿಳುವಳಿಕೆ ಪಡೆಯುವುದೇ ಶಿಕ್ಷಣದ ಮುಖ್ಯ ಉದ್ದೇಶ ಎಂದು ಹೇಳಿದರು.

ಅಕ್ಕಮಹಾದೇವಿ, ಬಸವಣ್ಣ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರಂತಹ ಮಹನೀಯರು ತಮ್ಮ ಜ್ಞಾನ ಮತ್ತು ಚಿಂತನೆಯ ಮೂಲಕ ಸಮಾಜಕ್ಕೆ ದಾರಿ ತೋರಿಸಿದ್ದಾರೆ. ಅವರ ಬದುಕಿನಿಂದ ವಿದ್ಯಾರ್ಥಿನಿಯರು ಸ್ಫೂರ್ತಿ ಪಡೆದು ಜ್ಞಾನವನ್ನು ಜೀವನದ ಆಸ್ತಿಯನ್ನಾಗಿ ಮಾಡಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು. ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ತಾಲೂಕು ಅಧ್ಯಕ್ಷ ವೈ. ನರೇಂದ್ರನಾಥ ಮಾತನಾಡಿ, ಪ್ರತಿಯೊಬ್ಬರೂ ಉತ್ತಮ ಶಿಕ್ಷಣ ಪಡೆದು ಉದ್ಯೋಗದಲ್ಲಿ ಸ್ಥಿರತೆ ಸಾಧಿಸಿದ ನಂತರ ವಿವಾಹವಾಗಬೇಕು ಎಂಬ ಮನೋಭಾವನೆ ಇತ್ತೀಚಿನ ದಿನಗಳಲ್ಲಿ ಹೆಚ್ಚಾಗಿದೆ. ವಿವಾಹದ ವಯಸ್ಸು ಮತ್ತು ಸಂತಾನೋತ್ಪತ್ತಿ ಆರೋಗ್ಯದ ಕುರಿತು ಯುವಜನರು ವೈಜ್ಞಾನಿಕ ಹಾಗೂ ವೈದ್ಯಕೀಯ ಮಾಹಿತಿಯನ್ನು ಪಡೆದುಕೊಳ್ಳುವುದು ಅಗತ್ಯ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಹೆಚ್. ಎಫ್. ಮಸ್ಕಿ ವಹಿಸಿದ್ದರು. ಶಾರದಾ ಮಹಿಳಾ ಪದವಿ ಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯ ಬಸವರಾಜ ಬಾದರ್ಲಿ ಕಾರ್ಯಕ್ರಮ ಉದ್ಘಾಟಿಸಿದರು.

ಮುಖ್ಯ ಅತಿಥಿಗಳಾಗಿ ಶಾರದಾ ಪದವಿ ಪೂರ್ವ ಮಹಾವಿದ್ಯಾಲಯದ ಉಪಾಧ್ಯಕ್ಷೆ ಅಕ್ಕಮಹಾದೇವಿ ಶಿವನಾಗಪ್ಪ, ಕೋಶಾಧ್ಯಕ್ಷೆ ಶಾಂತಾ ಒಳಗಿನಮನಿ, ಗೌರವ ಕಾರ್ಯದರ್ಶಿ ಮಹಮ್ಮದ್ ಮುಸ್ತಾಫ್, ಪತ್ರಕರ್ತ ವೀರೇಶ ಗಡ್ಡಿಮಾಳ, ಮುಖಂಡ ಹನುಮಂತಪ್ಪ ಗೋಮರ್ಸಿ ಸೇರಿದಂತೆ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ದೇವದುರ್ಗ BSNL ಕಚೇರಿ ಇದ್ದೂ ಇಲ್ಲದಂತೆ: ಸೇವೆಯಿಲ್ಲದೆ ಗ್ರಾಹಕರ ಪರದಾಟ, ಸಾರ್ವಜನಿಕರ ಆಕ್ರೋಶ!

❑ ನೈಜ್ಯ ದೆಸೆ ನ್ಯೂಸ್

**ದೇವದುರ್ಗ: ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕು ಕೇಂದ್ರದಲ್ಲಿರುವ ಃಖಓಐ ದೂರಸಂಪರ್ಕ ಕಚೇರಿಯಲ್ಲಿ ಸಾರ್ವಜನಿಕರಿಗೆ ಸಮರ್ಪಕ ಸೇವೆ ಹಾಗೂ ಮಾಹಿತಿ ದೊರೆಯುತ್ತಿಲ್ಲ ಎಂಬ ಆರೋಪಗಳು ಕೇಳಿಬಂದಿದ್ದು, ಗ್ರಾಮೀಣ ಪ್ರದೇಶಗಳಿಂದ ಆಗಮಿಸುವ ಗ್ರಾಹಕರು ಪರದಾಡುವಂತಾಗಿದೆ.**

ಹಿಂದೆ BSNL ಕಚೇರಿಯಲ್ಲಿಯೇ ಹೊಸ ಸಿಮ್‌ಕಾರ್ಡ್ ವಿತರಣೆ, ರೀಚಾರ್ಜ್ ಹಾಗೂ ಗ್ರಾಹಕರ ಕುಂದುಕೊರತೆಗಳಿಗೆ ಸ್ಪಂದಿಸುವ ವ್ಯವಸ್ಥೆ ಇತ್ತು. ಆದರೆ ಇದೀಗ ಹಲವು ಸೇವೆಗಳು ಫ್ರಾಂಚೈಸಿ ಕೇಂದ್ರಗಳ ಮೂಲಕ ನಡೆಯುತ್ತಿರುವುದರಿಂದ ಸರ್ಕಾರಿ ಕಚೇರಿಗೆ ಬರುವ ಗ್ರಾಹಕರಿಗೆ ಸೂಕ್ತ ಮಾಹಿತಿ ಸಿಗುತ್ತಿಲ್ಲ ಎಂದು ಸಾರ್ವಜನಿಕರು ಆರೋಪಿಸಿದ್ದಾರೆ. ಸಮಸ್ಯೆ ಕುರಿತು ವಿಚಾ–ರಿಸಲು ಕಚೇರಿಗೆ ತೆರಳಿದಾಗ, ಹೊರಗಿರುವ ಫ್ರಾಂಚೈಸಿ ಅಂಗಡಿಗಳಲ್ಲಿ ವಿಚಾರಿಸುವಂತೆ ಸಿಬ್ಬಂದಿ ಸೂಚಿಸುತ್ತಾರೆ ಎಂಬ ದೂರುಗಳೂ ಕೇಳಿಬಂದಿವೆ.

ಇದರಿಂದ ಗ್ರಾಮೀಣ ಭಾಗಗಳಿಂದ ಬರುವ ಬಡವರು, ಹಿರಿಯ ನಾಗರಿಕರು




ಹಾಗೂ ಸಾಮಾನ್ಯ ಗ್ರಾಹಕರು ಸರಿಯಾದ ಮಾಹಿತಿ ಪಡೆಯಲು ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಕಚೇರಿಯ ಸ್ವಚ್ಛತೆ ಹಾಗೂ ಮೂಲಸೌಕರ್ಯದ ಬಗ್ಗೆಯೂ ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಕೂಡಲೇ ಜಿಲ್ಲಾ ಮಟ್ಟದ ಃಖಓಐ ಅಧಿಕಾರಿಗಳು ಮಧ್ಯಪ್ರವೇಶಿಸಿ ದೇವದುರ್ಗದ ಃಖಓಐ ಕಚೇರಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಸಾರ್ವಜನಿಕ–ರಿಗೆ ಅನುಕೂಲವಾಗುವ ರೀತಿಯಲ್ಲಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

BSNL ಕಚೇರಿಯಲ್ಲಿ ಸಮರ್ಪಕ ಸಿಬ್ಬಂದಿ, ಗ್ರಾಹಕರ ಸೇವಾ ಕೌಂಟರ್ ಹಾಗೂ ಸ್ವಚ್ಛತೆ ಇಲ್ಲದೆ ಹಳೆಯ ಕಟ್ಟಡದಂತಾಗಿದ್ದು, ಅಗತ್ಯ ಮೂಲಸೌಕರ್ಯ ಕಲ್ಪಿಸಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಮುಖಂಡ ಭೀಮಣ್ಣ ಸಮುದ್ರ ಒತ್ತಾಯಿಸಿದ್ದಾರೆ.

### ಗ್ರಾಹಕರ ಕೇಂದ್ರ ಸ್ಥಾಪನೆಗೆ ಆಗ್ರಹ

ದೇವದುರ್ಗ ಃಖಓಐ ಕಚೇರಿಯಲ್ಲಿಯೇ ಹಿಂದಿನಂತೆ ಸಿಮ್ ವಿತರಣೆ, ರೀಚಾರ್ಜ್ ಹಾಗೂ ಗ್ರಾಹಕರ ಸಮಸ್ಯೆಗಳಿಗೆ ಸ್ಪಂದಿಸುವ ವಿಶೇಷ ಕೌಂಟರ್ ಆರಂಭಿಸಬೇಕು. ಜಿಲ್ಲಾ ಮಟ್ಟದ ದೂರಸಂಪರ್ಕ ಅಧಿಕಾರಿಗಳು ಕೂಡಲೇ ದೇವದುರ್ಗ ಕಚೇರಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಸಾರ್ವಜನಿಕರಿಗೆ ಅನುಕೂಲವಾಗುವಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ದೇವದುರ್ಗ ನಿವಾಸಿ ಮಹಮ್ಮದ್ ಜುನೈದ್ ಒತ್ತಾಯಿಸಿದ್ದಾರೆ. ದೇವದುರ್ಗದ ದೂರಸಂಪರ್ಕ ಕಚೇರಿಯಲ್ಲಿ ಹಿಂದಿನಂತೆ ಸಾರ್ವಜನಿಕರಿಗೆ ಸೇವೆ ಒದಗಿಸುವ ವಿಶೇಷ ಕೌಂಟರ್ ಸ್ಥಾಪಿಸಬೇಕು. ಕಚೇರಿಯಲ್ಲಿ ಸ್ವಚ್ಛತೆ ಹಾಗೂ ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವುದರ ಜೊತೆಗೆ, ಗ್ರಾಹಕರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸುವ ವ್ಯವಸ್ಥೆ ಮಾಡಬೇಕು ಎಂದು ೦ಘಐಇಖಿಐ ರಾಯಚೂರು ಘಟಕದ ಶಬ್ಬೀರ್ ಅಹ್ಮದ್ ಆಗ್ರಹಿಸಿದ್ದಾರೆ.

### ಸಿಬ್ಬಂದಿ ಕೊರತೆಯಿಂದ ಸಮಸ್ಯೆ: ಅಧಿಕಾರಿ

ಈ ಕುರಿತು ಪ್ರತಿಕ್ರಿಯಿಸಿದ ದೇವದುರ್ಗದ ಜೂನಿಯರ್ ಟೆಲಿಕಾಂ ಅಧಿಕಾರಿ ನಂದೂಲಾ ಸಾಯಿ ಕಾರ್ತಿಕ್, "ದೂರಸಂಪರ್ಕ ಕಚೇರಿಯಲ್ಲಿ ಸಿಬ್ಬಂದಿ ಕೊರತೆಯಿದ್ದು, ಕೇವಲ ಇಬ್ಬರು ಖಾಯಂ ನೌಕರರು ಮಾತ್ರ ಕಾರ್ಯನಿರ್ವಹಿಸುತ್ತಿದ್ದಾರೆ ಉಳಿದ ಸಿಬಂದಿ ಹೊರಗುತ್ತಿಗೆ ಯಲ್ಲಿ ಫೀಲ್ಡ್ ಕೆಲಸ ಮಾಡುತ್ತಾರೆ . ದೇವದುರ್ಗ ಸೇರಿದಂತೆ ಎಲ್ಲಾ ಹೋಬಳಿ ಕೇಂದ್ರಗಳನ್ನು ನಿರ್ವಹಿಸಲು ಖಾಯಂ ಸಿಬ್ಬಂದಿಯ ಅವಶ್ಯಕತೆ ಇದೆ. ಕೇಂದ್ರ ಸರ್ಕಾರದ ಅನುಮತಿಯಂತೆ ಹೊರಗಡೆ ಫ್ರಾಂಚೈಸಿ ಮೂಲಕ ಃಖಓಐ ಕೇಂದ್ರಗಳನ್ನು ತೆರೆಯಲಾಗುತ್ತಿದ್ದು, ದೇವದುರ್ಗದಲ್ಲಿಯೂ ಈಗಾಗಲೇ ಒಂದು ಕೇಂದ್ರ ಆರಂಭವಾಗಿದೆ. ಸಾರ್ವಜನಿಕರ ಸಮಸ್ಯೆಯನ್ನು ಮೇಲಧಿಕಾರಿಗಳ ಗಮನಕ್ಕೆ ತರಲಾಗುವುದು" ಎಂದು ತಿಳಿಸಿದ್ದಾರೆ.ಈಗ ದೇವದುರ್ಗ ದಲ್ಲಿ ಅಮರೇಶ್ ಎನ್ನುವವರಿಗೆ ಫ್ರಾಚೇಸಿ ನಿಡಲಾಗಿದೆ ಎಂದು ಹೇಳಿದರು

## ವಚನ ದರ್ಶನ –4

ವಚನದಲ್ಲಿ ನಾಮಾಮೃತ ತುಂಬಿ, ನಯನದಲ್ಲಿ ಮೂರುತಿ ತುಂಬಿ,
ಮನದಲ್ಲಿ ನಿಮ್ಮ ನೆನಹು ತುಂಬಿ, ಕಿವಿಯಲ್ಲಿ ಕೀರುತಿ ತುಂಬಿ,
ಕೂಡಲಸಂಗಮದೇವಾ, ನಿಮ್ಮ ಚರಣಕಮಲದಲಾನು ತುಂಬಿ!

ವಿಶ್ವಗುರು ಬಸವಣ್ಣನವರು ಸಮಾಜದ ಎಲ್ಲಾ ವ್ಯಕ್ತಿಗಳನ್ನು ಗೌರವದಿಂದ ಕಾಣುವ ಮೂಲಕ ಜಾತಿಯವರೂ ವಚನಗಳನ್ನು ಮುಖ್ಯ ಮಾಧ್ಯಮವನ್ನಾಗಿ ಮಾಡಿಕೊಂಡು, ತಮ್ಮ ಅನುಭವಗಳನ್ನು ಹೇಳಿಕೊಳ್ಳತೊಡಗಿದ್ದರಿಂದ ವಚನ ಸಾಹಿತ್ಯ ಒಂದು ಚಳವಳಿಯೂ ಆಯಿತು. ಬಂಡಾಯ ಸಾಹಿತ್ಯಕ್ಕಿಂತ ಮೊದಲು ಕನ್ನಡ ನಾಡಿನಲ್ಲಿ ವಚನವು ಒಂದು ಮುಖ್ಯ ಚಳುವಳಿಯಾಗಿತ್ತು ಮುಖವಾಣಿಯಾಗಿ–ತ್ತೆಂದರೆ ಅದರ ಸಾಮಾಜಿಕ ವ್ಯಾಪಕತೆ ಅಪಾರವಾದುದೆಂಬುದು ಅರಿವಿಗೆ ಬಾರದೆ ಇರದು. ವಚನಗಳು ಅತ್ಯಂತ ಸರಳ ಹಾಗೂ ನೇರವಾಗಿ ದೇಸಿಯ ಸೊಗಡಿನಿಂದ ಸೊಬಗಿನಿಂದ ಕೂಡಿವೆ. ಹಲವಾರು ಕವಿಗಳು, ಮಠಾಧೀಶರು ಲಿಂಗಾಯತ ಸಿದ್ಧಾಂತವನ್ನು ಅಳವಡಿಸಿ ಸಾಹಿತ್ಯ ರಚಿಸಿದರು, ಇಡೀ ಲಿಂಗಾಯತ ಸಾಹಿತ್ಯದಲ್ಲಿ ಮುಖ್ಯ ಮತ್ತು ಅಪರೂಪದ ಅಭಿವ್ಯಕ್ತಿಯೆಂದರೆ ಅದು ವಚನ ಸಾಹಿತ್ಯ. ಅದು ಸ್ಥಾವರ ಸಮಾಜವನ್ನು ತಿರಸ್ಕರಿಸಿ ಜಂಗಮ ಸಮಾಜವನ್ನು ನಂಬಿದ ಬಹಳ ದೊಡ್ಡ ಮಾನವೀಯ ಮೌಲ್ಯ. ಕಾಯಕ ಮತ್ತು ದಾಸೋಹಗಳ ಮೂಲಕ ಸಮಾಜೋತ್ಪನ್ನಗಳ ಸಮಪಾಲು ಸಿದ್ಧಾಂತವನ್ನು ಮಂಡಿಸುವ ಈ ಚಳವಳಿ ಭಾರತೀಯ ಸಂಸ್ಕೃತಿಯಲ್ಲೇ ಅತಿ ಪ್ರಮುಖವಾದುದು.

ವಿಶ್ವಗುರು ಬಸವಣ್ಣನವರ ಈ ವಚನವು ಭಕ್ತನೊಬ್ಬನ ಪರಿಪೂರ್ಣ ದೈವ ಸಮರ್ಪಣಾ ಭಾವವನ್ನು, ಇಂದ್ರಿಯಗಳ ನಿಗ್ರಹವನ್ನು ಮತ್ತು ದೇವರೆಡೆಗಿನ ಅಚಲ ಭಕ್ತಿಯನ್ನು ಸಾರುತ್ತದೆ. ಭಗವಂತನ ನಾಮಸ್ಮರಣೆ, ದರ್ಶನ, ಸ್ಮರಣೆ ಮತ್ತು ಶ್ರವಣದಿಂದ ಇಡೀ ಜೀವನವೇ ಪವಿತ್ರವಾಗಬೇಕು ಎಂಬುದು ಇದರ ಮುಖ್ಯ ಸಾರಾಂಶ. ಎಂದು ಹೇಳಬಹುದು.

ಮಾತು ಮತ್ತು ಶ್ರವಣ.ಆಡುವ ಮಾತಿನಲ್ಲಿ ದೇವರ ನಾಮವೆಂಬ ಅಮೃತವಿರಬೇಕು, ಕಿವಿಯಲ್ಲಿ ದೇವರ ಕೀರ್ತಿ–ಗುಣಗಾನಗಳು ತುಂಬಿರಬೇಕು.ದೃಷ್ಟಿ ಮತ್ತು ನೆನಪು. ಕಣ್ಣಿನಲ್ಲಿ ದೇವರ ಸುಂದರ ರೂಪದ ಮೂರ್ತಿಯಿರಬೇಕು, ಮನದಲ್ಲಿ ಸದಾ ದೇವರ ನೆನಪೇ ಇರಬೇಕು.ಪರಮ ಶರಣಾಗತಿ. ಕೂಡಲಸಂಗಮದೇವಾ, ನನ್ನ ಮನಸ್ಸು ಮತ್ತು ಜೀವವು ನಿಮ್ಮ ಚರಣ ಕಮಲಗಳಲ್ಲಿ ಪಾದಗಳೆಂಬ ತಾವರೆ ತುಂಬಿ ತುಳುಕಲಿ ಭೃಂಗದಂತೆ ಲೀನವಾಗಲಿ ಎನ್ನುವುದು ವಚನದ ಮೂಲ ಉದ್ದೇಶವಾಗಿದೆ. ಆದರೆ ನಾವು ನೀವುಗಳು ವಚನ ಪಚನವಾಗಬೇಕು ಎನ್ನುವುದು ನನ್ನ ಉದ್ದೇಶ ಅಷ್ಟೇ ಸರ್ವರಿಗೂ ಶರಣು ಶರಣಾರ್ಥಿಗಳು.

ಪಂಪಯ್ಯಸ್ವಾಮಿ ಸಾಲಿಮಠ
ಅಂತರಗಂಗಿ–ಸಿಂಧನೂರು. 998094144

## ದೇಶದಾದ್ಯಂತ ತೀವ್ರ ಚರ್ಚೆಗೆ ಗ್ರಾಸವಾಗಿದೆ 4 ತಿಂಗಳಲ್ಲಿ 22 ಮರಣದಂಡನೆ ಶಿಕ್ಷೆ ತೀರ್ಪು

❏ ನೈಜ್ಯ ದೆಸೆ ನ್ಯೂಸ್

**ನವದೆಹಲಿ: ಉತ್ತರ ಪ್ರದೇಶದ ಮುಜಫರ್‌ನಗರದ ತ್ವರಿತ ನ್ಯಾಯಾಲಯದ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ರವಿಕುಮಾರ್ ದಿವಾಕರ್ ಅವರು ಕಳೆದ ನಾಲ್ಕು ತಿಂಗಳುಗಳಲ್ಲಿ ನೀಡಿದ ಕಠಿಣ ಹಾಗೂ ದಿಟ್ಟ ತೀರ್ಪುಗಳ ಮೂಲಕ ಇಡೀ ದೇಶದ ಗಮನ ಸೆಳೆದಿದ್ದಾರೆ.**



ಕೇವಲ 4 ತಿಂಗಳ ಅವಧಿಯಲ್ಲಿ 10 ಪ್ರತ್ಯೇಕ ಕೊಲೆ ಪ್ರಕರಣಗಳಲ್ಲಿ ಒಟ್ಟು 22 ವ್ಯಕ್ತಿಗಳಿಗೆ ಮರಣದಂಡನೆ ಶಿಕ್ಷೆ ವಿಧಿಸಿರುವುದು ನ್ಯಾಯಾಂಗ ವಲಯದಲ್ಲಿ ಭಾರಿ ಚರ್ಚೆಗೆ ಗ್ರಾಸವಾಗಿದೆ. ಈ ಬೆಳವಣಿಗೆಯ ಬೆನ್ನಲ್ಲೇ, ಅವರ ನ್ಯಾಯಾಲಯದಲ್ಲಿದ್ದ ಸುಮಾರು 100 ಕೊಲೆ ಪ್ರಕರಣಗಳನ್ನು ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶ ವೀರೇಂದ್ರ ಕುಮಾರ್ ಸಿಂಗ್ ಅವರ ನ್ಯಾಯಾಲಯಕ್ಕೆ ವರ್ಗಾಯಿಸಲಾಗಿದೆ. ಕಳೆದ 4 ತಿಂಗಳಲ್ಲಿ 10 ಪ್ರಕರಣಗಳಲ್ಲಿ 22 ಜನರಿಗೆ ಮರಣದಂಡನೆ ವಿಧಿಸಲಾಗಿದೆ. ಮರಣದಂಡನೆ ಅಥವಾ ಜೀವಾವಧಿ ಶಿಕ್ಷೆಗೆ ಒಳಪಡುವ ಸುಮಾರು 100 ಬಾಕಿ ಕೊಲೆ ಪ್ರಕರಣಗಳನ್ನು ಬೇರೆ ನ್ಯಾಯಾಲಯಕ್ಕೆ ವರ್ಗಾಯಿಸಲಾಗಿದೆ.ನ್ಯಾಯಾಲಯವು ಸರಣಿಯಾಗಿ ಮರಣದಂಡನೆ ವಿಧಿಸುತ್ತಿರುವ ವೇಗ ಮತ್ತು ಕಠಿಣತೆಯ ಬಗ್ಗೆ ಸ್ಥಳೀಯ ವಕೀಲರು ಹಾಗೂ ಕಕ್ಷಿದಾರರಲ್ಲಿ ಆತಂಕ ವ್ಯಕ್ತವಾಗಿದೆ ಎಂದು ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಪ್ರಮೋದ್ ತ್ಯಾಗಿ ತಿಳಿಸಿದ್ದಾರೆ. ನ್ಯಾಯಾಧೀಶ ರವಿಕುಮಾರ್ ದಿವಾಕರ್ ಹಿನ್ನೆಲೆ : 46 ವರ್ಷದ ಲಕ್ನೋ ನಿವಾಸಿಯಾಗಿರುವ ರವಿಕುಮಾರ್ ದಿವಾಕರ್ ಅವರು ಬಿಕಾಂ ಮತ್ತು ಎಲ್‌ಎಲ್‌ಎಂ ಪದವಿ ಪಡೆದಿದ್ದಾರೆ. 2009ರಲ್ಲಿ ಅಜಂಗಢದಲ್ಲಿ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾಗಿ ತಮ ವೃತ್ತಿಜೀವನ ಆರಂಭಿಸಿದ ಅವರು, 2015ರಲ್ಲಿ ಸುಲ್ತಾನಪುರದಲ್ಲಿ ಬಡ್ತಿ ಪಡೆದರು. ಇವರು ಈ ಹಿಂದೆ 2022ರಲ್ಲಿ ವಾರಾಣಸಿಯ ಜ್ಞಾನವಾಪಿ ಸಂಕೀರ್ಣದ ವೀಡಿಯೊಗ್ರಫಿ ಸಮೀಕ್ಷೆ ನಡೆಸಲು ಆದೇಶ ಹೊರಡಿಸುವ ಮೂಲಕ ದೇಶಾದ್ಯಂತ ವ್ಯಾಪಕ ಸುದ್ದಿಯಲ್ಲಿದ್ದರು. ನವೆಂಬರ್ 2025 ರಿಂದ ಮುಜಫರ್‌ನಗರದಲ್ಲಿ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್?ಸ ನ್ಯಾಯಾಧೀಶರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಪ್ರಮುಖ ತೀರ್ಪುಗಳ ಪಟ್ಟಿ : ಆಗಸ್ಟ್ 13 (12 ವರ್ಷ ಹಳೆಯ ಪ್ರಕರಣ): 2014ರ ಶಾಮ್ಲಿ ಜಿಲ್ಲೆಯ ಹಳೆಯ ದ್ವೇಷದ ಕೊಲೆ ಪ್ರಕರಣದಲ್ಲಿ ರಾಮ್‌ವೀರ್, ರಾಜೀವ್, ರಾಹುಲ್ ಮತ್ತು ಹರೇಂದರ್ ಕುಮಾರ್ ಎಂಬುವವರಿಗೆ ಮರಣದಂಡನೆ ಹಾಗೂ ತಲಾ 1.70 ಲಕ್ಷ ರೂ. ದಂಡ ವಿಧಿಸಲಾಯಿತು. ಆಗಸ್ಟ್ 12 (1999ರ ಸುಲಿಗೆ ಪ್ರಕರಣ): 27 ವರ್ಷಗಳ ಹಿಂದೆ 5 ಲಕ್ಷ ರೂ. ಸುಲಿಗೆಗಾಗಿ ಮರದ ವ್ಯಾಪಾರಿ ಸಲೀಂ ಅವರನ್ನು ಅಪಹರಿಸಿ ಕತ್ತು ಸೀಳಿ ಕೊಂದ ಶಹನವಾಜ್ ಎಂಬಾತನಿಗೆ ಮರಣದಂಡನೆ ಶಿಕ್ಷೆ ನೀಡಲಾಯಿತು. ಜುಲೈ 17 (2011ರ ರೈತ ಕೊಲೆ): ದರೋಡೆ ಯತ್ನವನ್ನು ವಿರೋಧಿಸಿದ ರೈತ ರಾಜ್ ಸಿಂಗ್ ಹತ್ಯೆ ಪ್ರಕರಣದಲ್ಲಿ ನಾಲ್ವರಿಗೆ ಮರಣದಂಡನೆ ವಿಧಿಸಲಾಯಿತು.ಜುಲೈ 6 (2010ರ ರಾಜಬೀರ್ ಸಿಂಗ್ ಕೊಲೆ): ಪಂಚಾಯತ್ ಚುನಾವಣಾ ದ್ವೇಷದ ಹಿನ್ನೆಲೆಯಲ್ಲಿ 60 ವರ್ಷದ ವ್ಯಕ್ತಿಯನ್ನು ಹತ್ಯೆ ಮಾಡಿದ್ದ ಮಾಜಿ ಗ್ರಾಮ ಮುಖ್ಯಸ್ಥ ಪ್ರಮೋದ್ ಮತ್ತು ಸಹಚರ ಸಹದೇವ್ ಅವರಿಗೆ ಮರಣದಂಡನೆ ನೀಡಲಾಯಿತು.

# ಛಾಯಾಗ್ರಾಹಕರ ಸಂಕಷ್ಟಕ್ಕೆ ಸರ್ಕಾರ ಸ್ಪಂದಿಸಲಿ ಕರಿಬಸವ ಶಿವಾಚಾರ್ಯರ

❏ ನೈಜ್ಯ ದೆಸೆ ನ್ಯೂಸ್

**ಕುಷ್ಟಗಿ: ಛಾಯಾಚಿತ್ರಗಳು ಕಳೆದುಹೋದ ಸಂಬಂಧ, ಸ್ನೇಹ ಹಾಗೂ ಹಳೆಯ ನೆನಪುಗಳನ್ನು ಮತ್ತೆ ಕಣ್ಮುಂದೆ ತರುವ ಶಕ್ತಿ ಹೊಂದಿವೆ. ಛಾಯಾಗ್ರಾಹಕರ ಜೀವನದ ಸಂಕಷ್ಟಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ, ಅವರ ಬದುಕಿಗೆ ನೆರವಾಗುವಂತಹ ವಿಶೇಷ ಯೋಜನೆಗಳನ್ನು ರೂಪಿಸಬೇಕು ಎಂದು ಮದ್ದಾನಿಮಠದ ಕರಿಬಸವ ಶಿವಾಚಾರ್ಯರು ಹೇಳಿದರು.**




ಪಟ್ಟಣದ ಎನ್‌ಸಿಎಚ್ ಪ್ಯಾಲೇಸ್‌ನಲ್ಲಿ ಕುಷ್ಟಗಿ ತಾಲೂಕು ಛಾಯಾಚಿತ್ರಗ್ರಾಹಕರ ಗ್ರಾಮೀಣಾಭಿವೃದ್ಧಿ ವಿವಿಧೋದ್ದೇಶ ಸೇವಾ ಸಂಸ್ಥೆ ವತಿಯಿಂದ ವಿಶ್ವ ಛಾಯಾಗ್ರಹಣ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ 'ಛಾಯಾ ಸಮ್ಮಿಲನ?2026' ಹಾಗೂ 27ನೇ ವಾರ್ಷಿಕೋತ್ಸವ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು. ಮಾದರಿ ಸಿಪಿಐ ವಿಶ್ವನಾಥ ಹಿರೇಗೌಡ್ರು ಮಾತನಾಡಿ, ಛಾಯಾಗ್ರಾಹಕರು ತಮ್ಮ ವೈಯಕ್ತಿಕ ಕಷ್ಟ, ದುಃಖಗಳನ್ನು ಬದಿಗೊತ್ತಿ ಸಮಾಜದ ವಿವಿಧ ಘಟನೆಗಳನ್ನು ದಾಖಲಿಸುವ ಜೊತೆಗೆ ಕಷ್ಟದಲ್ಲಿರುವವರ ಮುಖದಲ್ಲಿ ನಗು ಮೂಡಿಸುವ ಕಾರ್ಯ ಮಾಡುತ್ತಿದ್ದಾರೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷ ಅಣ್ಣಿರಯ್ಯ ಹಿರೇಮಠ ವಹಿಸಿದ್ದರು. ಮಾಜಿ ಜಿಪಂ ಸದಸ್ಯ ಕೆ. ಮಹೇಶ ಪ್ರಾಸ್ತಾವಿಕವಾಗಿ ಮಾತನಾಡಿದರು. ಕರಿಬಸವ ಶಿವಾಚಾರ್ಯರು ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಈ ಸಂದರ್ಭದಲ್ಲಿ 2025?26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಉತ್ತಮ ಅಂಕಗಳನ್ನು ಪಡೆದ ತಾಲೂಕಿನ ಛಾಯಾಗ್ರಾಹಕರ ಮಕ್ಕಳನ್ನು ಪ್ರೋತ್ಸಾಹಿಸಿ ಸನ್ಮಾನಿಸಲಾಯಿತು. ಸಮಾಜ ಸೇವಕರಾದ ರವಿಕುಮಾರ ಮದ್ದಾನಿ ಹಿರೇಮಠ ಉಪಾಧ್ಯಕ್ಷ ರಾಮಣ್ಣ ನೆರೆಬೆಂಚಿ, ಮಾಜಿ ಜಿಪಂ ಸದಸ್ಯ ದೊಡ್ಡಯ್ಯ ಗದ್ದಡಕಿ, ಮಹಾಂತೇಶ ಅಗಸಿಮುಂದಿನ, ಬಸವರಾಜ ಹಳ್ಳೂರ, ಮಲ್ಲಣ್ಣ ಪಲ್ಲೇದ, ಸಂಗಮೇಶ ಹಿರೇಗೌಡ, ಪ್ರಕಾಶಗೌಡ ಮಾಲಿಪಾಟೀಲ, ಚಂದ್ರಶೇಖರಗೌಡ ನಾಡಗೌಡ ಉಮೇಶ ಮಂಗಳೂರು ಸೇರಿದಂತೆ ಸಂಘದ ಪದಾಧಿಕಾರಿಗಳು, ಛಾಯಾಗ್ರಾಹಕರು, ಕುಟುಂಬಸ್ಥರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ರಾಜ್ಯದಲ್ಲಿ 25,921 ಪಾಲಿಟೆಕ್ನಿಕ್ ಸೀಟುಗಳು ಖಾಲಿ : ಸಚಿವ ರಾಯರೆಡ್ಡಿ

❏ ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ರಾಜ್ಯದಲ್ಲಿ 120 ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳು ಮಂಜೂರಾಗಿದ್ದು, 117 ಪಾಲಿಟೆಕ್ನಿಕ್ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ. ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ 72,057 ಸೀಟುಗಳು ಲಭ್ಯವಿದ್ದು, ಪೂರ್ಣ ಪ್ರಮಾಣದಲ್ಲಿ ವಿದ್ಯಾರ್ಥಿಗಳು ಪ್ರವೇಶ ಪಡೆಯುತ್ತಿಲ್ಲ ಎಂದು ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ ವಿಧಾನಸಭೆಗೆ ತಿಳಿಸಿದರು.**



ರಾಜ್ಯದಲ್ಲಿ 25,921 ಪಾಲಿಟೆಕ್ನಿಕ್ ಸೀಟುಗಳು ಪ್ರವೇಶ ಪಡೆಯದೆ ಖಾಲಿ ಉಳಿದಿವೆ ಎಂದು ಅವರು ಹೇಳಿದರು. ಪ್ರತಿಪಕ್ಷಗಳ ಪ್ರತಿಭಟನೆ, ಗದ್ದಲದ ನಡುವೆ ನಡೆದ ಪ್ರಶ್ನೋತ್ತರ ಕಲಾಪದಲ್ಲಿ ಆಡಳಿತ ಪಕ್ಷದ ಶಾಸಕ ಅಬ್ಬಯ್ಯ ಪ್ರಸಾದ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಸರ್ಕಾರಿ ಮತ್ತು ಅನುದಾನಿತ 46,136 ವಿದ್ಯಾರ್ಥಿಗಳು ಪ್ರವೇಶ ಪಡೆದಿದ್ದು, ಉಳಿದ ಸೀಟುಗಳು ಖಾಲಿ ಉಳಿದಿವೆ ಎಂದರು. ಕಾಗವಾಡ, ಮಾಗಡಿ ಹಾಗೂ ಟಿ. ನರಸೀಪುರದಲ್ಲಿ ಪಾಲಿಟೆಕ್ನಿಕ್ ಕಾಲೇಜು ಕಟ್ಟಡಗಳ ನಿರ್ಮಾಣ ಕಾಮಗಾರಿಗಳು ಪ್ರಗತಿಯಲ್ಲಿದ್ದು, ಕಾಮಗಾರಿ ಪೂರ್ಣಗೊಂಡ ನಂತರ ಆ ಕಾಲೇಜುಗಳನ್ನು ಪ್ರಾರಂಭಿಸಲಾಗುವುದು. ತಾಂತ್ರಿಕ ಶಿಕ್ಷಣ ಇಲಾಖೆಯಡಿ 9 ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್ ಕಾಲೇಜುಗಳು ಹಾಗೂ ಒಂದು ಅನುದಾನಿತ ಮಹಿಳಾ ಪಾಲಿಟೆಕ್ನಿಕ್ ಕಾಲೇಜು ಕಾರ್ಯನಿರ್ವಹಿಸುತ್ತಿವೆ ಎಂದು ತಿಳಿಸಿದರು. ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಶೇ.30ರಷ್ಟು ಪ್ರವೇಶಾತಿಯನ್ನು ವಿದ್ಯಾರ್ಥಿನಿಯರಿಗೆ ಮೀಸಲಿಡಲಾಗಿದೆ. ಹುಬ್ಬಳ್ಳಿಯಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯು ನಾಲ್ಕು ಕೋರ್ಸ್‌ಗಳು ಹಾಗೂ ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್ ಸಂಸ್ಥೆಯು ಆರು ಕೋರ್ಸ್‌ಗಳೊಂದಿಗೆ ಕಾರ್ಯನಿರ್ವಹಿಸುತ್ತಿವೆ ಎಂದರು.

2025–26ನೇ ಸಾಲಿನಲ್ಲಿ 109 ಸರ್ಕಾರಿ, 43 ಅನುದಾನಿತ ಹಾಗೂ 135 ಖಾಸಗಿ ಪಾಲಿಟೆಕ್ನಿಕ್ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ ಎಂದು ಸಚಿವರು ಹೇಳಿದರು.

# ಅಂತು ಇಂತು ಶಾಲೆಗೆ ಶಾಶ್ವತ ವಿದ್ಯುತ್ ಸಮಸ್ಯೆ ಬಗೆಹರಿಯಿತು : ಎ.ಎಸ್.ಭೂಮೇಶ್ವರ

❏ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ : ಸೋಮಲಾಪುರ ಗ್ರಾಮದ ಹೊಸ ಕಟ್ಟಡದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆರಂಭದಿಂದಲೂ ಉದ್ಭವಿಸಿದ್ದ ವಿದ್ಯುತ್ ಸರಬರಾಜು ಸಮಸ್ಯೆಗೆ ಅಂತ ಇಂತು ಮುಕ್ತಿ ಸಿಕ್ಕಿದೆ ಎಂದು ಸಿಆರ್‌ಪಿ ಎ.ಎಸ್.ಭೂಮೇಶ್ವರ ಹೇಳಿದರು. ತಾಲೂಕಿನ ದೇವಲಾಪುರ ಗ್ರಾಪಂಯ ವ್ಯಾಪ್ತಿಯ ಸೋಮಲಾಪುರ ಗ್ರಾಮದ ಗುಡ್ಡದ ಬಳಿಯಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿದ್ಯುತ್ ಸಮಸ್ಯೆ ಬಗೆಹರಿಸಿದ ಹಿನ್ನಲೆ ಜೆಸ್ಕಾಂ ಲೈನ್ ಮ್ಯಾನ್ ಹೊನ್ನೂರಸ್ವಾಮಿ ಇವರಿಗೆ ಬುಧವಾರ ಸನ್ಮಾನಿಸಿ ಗೌರವಿಸಿದ ನಂತರ ಮಾತನಾಡಿ,**




ಗ್ರಾಮದ ಹಳೆ ಶಾಲೆಯೂ ಗುಡ್ಡದ ಬಳಿಯಲ್ಲಿ ನಿರ್ಮಾಣಗೊಂಡ ಸುಸಜ್ಜಿತ ಶಾಲೆಗೆ 2023ರಲ್ಲಿ ಸ್ಥಳಾಂತರಗೊಂಡಿತು. ಮಕ್ಕಳಿಗೆ ಒಳ್ಳೆಯ ಶಿಕ್ಷಣ, ಕೊಠಡಿಗಳ ಜೊತೆಗೆ ಮೂಲಭೂತ ಸೌಲಭ್ಯ ಕಲ್ಪಿಸಿತ್ತಾದರೂ ವಿದ್ಯುತ್ ಸಮಸ್ಯೆ ಮಾತ್ರ ಕಾಡ ತೊಡಗಿತ್ತು. ಶಾಲೆಯಲ್ಲಿ ಕಂಪ್ಯೂಟರ್, ಲೈಟ್, ನೀರಿನ ಸರಬರಾಜಿಗೆ ಸಂಬಂಧಿಸಿಡಂತೆ ವಿದ್ಯುತ್ ಸಮಸ್ಯೆ ಉಂಟಾದ ಪರಿಣಾಮ ತಾತ್ಕಾಲಿಕವಾಗಿ ಕಟ್ಟಿಗೆಯ ಕಂಬಗಳಿಂದ ತಂತಿಗಳೊಂದಿಗೆ ಸರಬರಾಜು ಮಾಡಿಕೊಳ್ಳಲಾಗಿತ್ತು. ಶಾಶ್ವತವಾಗಿ ವಿದ್ಯುತ್ ಸರಬರಾಜಿನ ವ್ಯವಸ್ಥೆ ಮಾಡಿಕೊಡಬೇಕೆಂದು, ಸ್ಥಳೀಯ ಶಾಸಕರ, ಜನಪ್ರತಿನಿಧಿಗಳ, ಸ್ಥಳೀಯ ಮುಖಂಡರ ಮತ್ತು ಶಿಕ್ಷಣ ಇಲಾಖೆ ಅಧಿಕಾರಿಗಳ ಗಮನಕ್ಕೆ ಹಿಂದಿನ ಪ್ರಭಾರಿ ಮುಖ್ಯಗುರು ಕೆ.ಮಲ್ಲಯ್ಯ ಅವರ ಮುಖಾಂತರ ಮನವಿ ಮಾಡಲಾಗಿತ್ತು. ನಿರಂತರವಾಗಿ ಒತ್ತಡ ಹಾಕಿದ ಹಿನ್ನಲೆ ಜೆಸ್ಕಾಂ ಅಧಿಕಾರಿಗಳು ಹೆಚ್ಚಿನ ಮಟ್ಟದಲ್ಲಿ ಗಮನಕ್ಕೆ ತೆಗೆದುಕೊಂಡು, ಕಂಬಗಳನ್ನು ಹಾಕಿ, ತಂತಿ ಅಳವಡಿಸಿ, ಇಲ್ಲಿನ ಗುಡ್ಡದ ಶಾಲೆಗೆ ವಿದ್ಯುತ್ ಸಂಪರ್ಕ ಕಲ್ಪಿಸಿಕೊಟ್ಟಿದ್ದಾರೆ. ಸ್ಥಳೀಯ ಶಾಸಕರಾದ ಜೆ.ಎನ್.ಗಣೇಶ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ಕೆ.ಶ್ರೀನಿವಾಸರಾವ್, ಕ್ಷೇತ್ರಶಿಕ್ಷಣಾಧಿಕಾರಿ ಸಿದ್ಧಲಿಂಗಮೂರ್ತಿ, ಎಇಇ ಶ್ರೀನಿವಾಸ ಪ್ರಸಾದ್, ಜೆಇ ಶಮಿಉಲ್ಲಾ, ಜನಪ್ರತಿನಿಧಿಗಳು, ಸ್ಥಳೀಯ ಮುಖಂಡರ ಸಹಕಾರ ಶ್ಲಾಘನೀಯವಾಗಿದೆ. ಇದೇ ತರನಾಗಿ ಬಡ್ತಿ ಮುಖ್ಯಗುರು ಎಸ್.ಚಂದ್ರಪ್ಪ ಇವರಿಗೆ ಸಹಕಾರ ನೀಡುವ ಮೂಲಕ ಮಕ್ಕಳ ಶೈಕ್ಷಣಿಕ ಮಟ್ಟದ ಅಭಿವೃದ್ಧಿ ಅನುವು ಮಾಡಿಕೊಡಬೇಕು ಎಂದರು. ನಂತರ ಬಡ್ತಿ ಮುಖ್ಯಗುರು ಎಸ್.ಚಂದ್ರಪ್ಪ ಇವರಿಗೂ ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಸಹ ಶಿಕ್ಷಕರಾದ ಕೆ.ಮಲ್ಲಯ್ಯ, ಹೆಚ್.ರಾಜಪ್ಪ, ಅತಿಥಿ ಶಿಕ್ಷಕಿಂ–ಯರಾದ ಶೃತಿ, ಸಹಾಯಕ ಸಿಬ್ಬಂದಿ ಪೀರಾಂಬೀ ಇದ್ದರು.

# ಮಾಜಿ ಪ್ರಧಾನಿ ರಾಜೀವ್ ಗಾಂಧಿ 82ನೇ ಜನ್ಮದಿನ : ಕಾಂಗ್ರೆಸ್ಸಿಗರ ನಮನ

❏ ನೈಜ್ಯ ದೆಸೆ ನ್ಯೂಸ್

**ನವದೆಹಲಿ: ಮಾಜಿ ಪ್ರಧಾನಿ ರಾಜೀವ್ ಗಾಂಧಿ ಅವರ 82ನೇ ಜನ್ಮದಿನದ ಅಂಗವಾಗಿ ಕಾಂಗ್ರೆಸ್ ನಾಯಕರು ಅವರಿಗೆ ಶ್ರದ್ಧಾಂಜಲಿ ಸಲ್ಲಿಸಿದರು. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು, ಪರಿವರ್ತನಾಶೀಲ ಬದಲಾವಣೆಗಳು, ಭಾರತದ ಯುವಜನತೆ, ತಾಂತ್ರಿಕ ಪ್ರಗತಿ ಹಾಗೂ ಹೊಸ ವಿಚಾರಗಳ ಶಕ್ತಿಯಲ್ಲಿ ರಾಜೀವ್ ಗಾಂಧಿ ಹೊಂದಿದ್ದ ನಿರಂತರ ನಂಬಿಕೆಯಲ್ಲಿ ಅವರ ಪರಂಪರೆ ಜೀವಂತವಾಗಿದೆ ಎಂದು ಹೇಳಿದರು.**



ತಮ್ಮ ತಂದೆ ರಾಜೀವ್ ಗಾಂಧಿ ಅವರ ಕನಸಿನ ಭಾರತವನ್ನು ನಿರ್ಮಿಸುವ ಸಂಕಲ್ಪವು ಯಾವಾಗಲೂ ತಮ್ಮನ್ನು ಮುನ್ನಡೆಸುತ್ತಿರುತ್ತದೆ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಹೇಳಿದರು. ಖರ್ಗೆ, ರಾಹುಲ್ ಗಾಂಧಿ, ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷೆ ಸೋನಿಯಾ ಗಾಂಧಿ ಹಾಗೂ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ವಾದ್ರಾ ಅವರು ರಾಜೀವ್ ಗಾಂಧಿ ಅವರ ಸ್ಮಾರಕ ವೀರಭೂಮಿಯಲ್ಲಿ ಪುಷ್ಪನಮನ ಸಲ್ಲಿಸಿದರು.

ಸದ್ಭಾವನಾ ದಿವಸ್ ಸಂದರ್ಭದಲ್ಲಿ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಖರ್ಗೆ, ಲಕ್ಷಾಂತರ ಜನರಲ್ಲಿ ಭರವಸೆಯನ್ನು ಮೂಡಿಸಿದ ಹಾಗೂ 21ನೇ ಶತಮಾನದ ಸವಾಲುಗಳಿಗೆ ಭಾರತವನ್ನು ಸಿದ್ಧಪಡಿಸಲು ನೆರವಾದ ದಾರ್ಶನಿಕ ನಾಯಕ ರಾಜೀವ್ ಗಾಂಧಿ ಅವರನ್ನು ಸ್ಮರಿಸುತ್ತೇವೆ ಎಂದು ಹೇಳಿದರು. ರಾಜೀವ್ ಗಾಂಧಿ ಅವರಿಗೆ ಸಲ್ಲಿಸಬಹುದಾದ ಅತ್ಯಂತ ಅರ್ಥಪೂರ್ಣ ಗೌರವವೆಂದರೆ ಭಾರತದ ಸಹಾನುಭೂತಿ, ಸಾಮರಸ್ಯ ಮತ್ತು ಸಮನ್ವಯದ ಕಾಲಾತೀತ ಮನೋಭಾವವನ್ನು ಬಲಪಡಿಸುವುದರ ಜತೆಗೆ ಬೌದ್ಧಿಕ ಸ್ವಾತಂತ್ರ್ಯ, ನಾವೀನ್ಯತೆ ಮತ್ತು ಯುವಜನರ ಆಕಾಂಕ್ಷೆಗಳನ್ನು ಪೋಷಿಸುವುದಾಗಿದೆ ಎಂದು ಕಾಂಗ್ರೆಸ್ ಅಧ್ಯಕ್ಷರು ಹೇಳಿದರು.

ಭಾರತೀಯರಲ್ಲಿ ಸಾಮರಸ್ಯ, ಪ್ರತಿಯೊಬ್ಬರ ಹೃದಯದಲ್ಲಿ ಕರುಣೆ ಹಾಗೂ ಪ್ರತಿಯೊಬ್ಬ ನಾಗ–ರಿಕನಿಗೂ ನ್ಯಾಯ ಮತ್ತು ಪ್ರಜಾಪ್ರಭುತ್ವದಲ್ಲಿ ಸಮಾನ ಹಕ್ಕುಗಳು ಎಂಬ ತಂದೆಯ ಬೋಧನೆ ತಮ್ಮ ಶಕ್ತಿ ಮತ್ತು ಅವರ ನೆನಪು ತಮ್ಮ ಧೈರ್ಯವಾಗಿದೆ ಎಂದು ರಾಹುಲ್ ಗಾಂಧಿ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

## ದಿನ ದಲಿತ ದಮನಿತ ವರ್ಗಗಳಿಗೆ ಆಶಾಕಿರಣವಾಗಿ, ಹಿಂದುಳಿದವರ ಬದುಕಿಗೆ ಹೊಸ ದಾರಿಯಾದವರು ಅರಸುರವರು ರೈತರ ಪಾಲಿನ ಮಹಾನ್ ನಾಯಕ : ಜೂಗಲ್ ಮಂಜುನಾಯಕ

❏ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ: ರಾಜ್ಯದ ಶೋಷಿತರು, ಹಿಂದುಳಿದವರು, ದಲಿತರು, ಬಡವರು, ರೈತರು ಹಾಗೂ ಅವಕಾಶಗಳಿಂದ ವಂಚಿತವಾದ ಸಮುದಾಯಗಳಿಗೆ ಸಮಾನತೆ ಮತ್ತು ನ್ಯಾಯದ ಮರ?ಗ ತೋರಿದ ಮಹಾನ್ ನಾಯಕ ಡಿ.ದೇವರಾಜು ಅರಸು ಆಗಿದ್ದರು ಎಂದು ತಹಸಿಲ್ದಾರ್ ಜೂಗಲ್ ಮಂಜುನಾಯಕ ತಿಳಿಸಿದರು.**




ಅವರು ಪಟ್ಟಣದ ತಹಸಿಲ್ದಾರ್ ಕಚೇರಿ ಸಭಾಂಗಣದಲ್ಲಿ ತಾಲ್ಲೂಕು ಆಡಳಿತ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಏರ್ಪಡಿಸಿದ ಸಮಾನತೆಯ ಹರಿಕಾರ ದಿ.ಡಿ.ದೇವರಾಜು ಅರಸು ಅವರ ಜಯಂತಿ ಕಾರ?ಯಕ್ರಮದಲ್ಲಿ ದೇವರಾಜು ಅರಸು ಅವರ ಭಾವಚಿತ್ರಕ್ಕೆ ವಿಶೇಷ ಪೂಜೆಯನ್ನು ಸಲ್ಲಿಸಿ, ಪುಷ್ಪರ?ಪಣೆ ಮಾಡಿ ಮಾತನಾಡಿದರು.

ಮೈಸೂರು ಜಿಲ್ಲೆ ಹುಣಸೂರು ತಾಲ್ಲೂಕಿನ ಕಲ್ಲಹಳ್ಳಿಯಲ್ಲಿ ಅರಳಿದ ಹೂವು ಕರುನಾಡಿಗೆ ಬೆಳಕಾಗಿ ದಲಿತ,ದಮನಿತ ವರ್ಗಗಳಿಗೆ ಆಶಾಕಿರಣವಾಗಿ, ಹಿಂದುಳಿದವರ ಬದುಕಿಗೆ ಹೊಸ ದಾರಿಯಾದವರು ಅರಸು. ರೈತರ ಪಾಲಿನ ಹಕ್ಕಿನ ಧ್ವನಿಯಾಗಿ,ಅಭಿವೃದ್ಧಿಯ ಹೆಜ್ಜೆ ಗುರುತು ಮೂಡಿಸಿದವರು ಎನ್ನುವುದಕ್ಕೆ ರಾಜ್ಯದ ರಾಜಕೀಯ ಮತ್ತು ಸಾಮಾಜಿಕ ಇತಿಹಾಸದಲ್ಲಿ ದಾಖಲಾಗಿರುವ ಅವರ ಕೊಡುಗೆಗಳೇ ಸಾಕ್ಷಿಯಾಗಿವೆ. 1972ರಲ್ಲಿ ರ?ನಾಟಕದ ಮುಖ್ಯಮಂತ್ರಿಗಳಾಗಿ ಅಧಿಆಕರ ಸ್ವೀಕರಿಸಿದ ಅರಸು ಅವರು ರಾಜ್ಯದ ಆಡಳಿತಕ್ಕೆ ಹೊಸ ಸಾಮಾಜಿಕ ದೃಷ್ಟಿಕೋನ ನೀಡಿದವರು. ಅವರ ಆಡಳಿತಾವಧಿಯಲ್ಲಿ ಕರ?ನಾಟಕದ ಸಾಮಾಜಿಕ ಹಾಗೂ ಆರ್ಥಿಕ, ಇತಿಹಾಸದಲ್ಲಿ ಮಹತ್ತರ ತಿರುವಾಗಿ ಗುರುತಿಸಲ್ಪಟ್ಟಿದೆ. ಆಡಳಿತದ ಕೇಂದ್ರ ಬಿಂದುವಿನಲ್ಲಿ ಸಾಮಾನ್ಯ ನಾಗ–ರೀಕನನ್ನು ಇರಿಸಿ ದಶಕಗಳ ಕಾಲ ಅವಕಾಶಗಳಿಂದ ದೂರವಿದ್ದ ಸಮದುಆಯಗಳಿಗೆ ಶಿಕ್ಷಣ, ಉದ್ಯೋಗ, ಭೂಮಿ ಹಾಗೂ ಸಾಮಾಜಿಕ ಗೌರವದೊರಕಿಸುವ ನಿಟ್ಟಿನಲ್ಲಿ ಮಹತ್ವದ ಕ್ರಮಗಳನ್ನು ಕೈಗೊಂಡಿದ್ದಾರೆ. ಅರಸುವರ ಆಡಳಿತದ ಅತ್ಯಂತ ಗಮನರ?ಹ ಕೊಡುಗೆಗಳಲ್ಲಿ ಭೂಸುಧಾರಣೆ ಅತ್ಯಂತ ಪ್ರಮುಖವಾದದ್ದು. ಉಳುವವನೇ ಒಡೆಯ ಎನ್ನುವ ಆಶಯವನ್ನು ಕರ?ಯರೂಪಕ್ಕರ ತರುವ ಮೂಲಕ ಗ್ರಾಮೀಣ ಸಮಾಜದ ಸ್ವರೂಪವನ್ನೇ ಬದಲಿಸುವಲ್ಲಿ ಮಹತ್ವದ ಪಾತ್ರವನ್ನು ವಹಿಸಿದವು.ಇದರಿಂದ ಭೂಮಿಯನ್ನು ಉಳುಮೆ ಮಾಡುತ್ತಿದ್ದರೂ ಮಾಲೀಕತ್ವ ಹೊಂದಿರದ ಅನೇಕ ಗೇಣಿದಾರ ಕುಟುಂಬಗಳಿಗೆ ಹಕ್ಕಿನ ಭರವಸೆ ದೊರಕಿತು. ಎಲ್.ಜಿ.ಹಾವನೂರು ಅವರ ಅಧ್ಯಕ್ಷತೆಯಲ್ಲಿ ಹಿಂದುಳಿದ ವರ್ಗಗಳ ಆಯೋಗವನ್ನು ರಚಿಸಿದರು.

ವಿವಿಧ ಸಮುದಾಯಗಳ ಸಾಮಾಜಿ–ಕ,ಶೈಕ್ಷಣಿಕ ಹಾಗೂ ರ?ಥಿಕ ಸ್ಥಿತಿಗತಿಗಳನ್ನು ಅಧ್ಯನ ಮಾಡಿ ಶಿಫಾರಸ್ಸುಗಳನ್ನು ನೀಡಿದ ಹಾವನೂರು ಆಯೋಗದ ವರದಿ ರ?ನಾಟಕದಲ್ಲಿ ಸಾಮಾಜಿಕ ನ್ಯಾಯದ ರ?ಚೆಗೆ ಹೊಸ ಆಯಾಮ ನೀಡಿತು ಹಾಗೂ ಪ್ರಾತಿನಿಧ್ಯ ಮತ್ತು ಮೀಸಲಾತಿ ಕುರಿತ ನೀತಿಗಳ ಬೆಳವಣಿಗೆಗೆ ಇದು ಪ್ರಮುಖ ಆಧಾರವಾಯಿತೆಂದು ವಿವರಿಸಿದರು. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯರ?ಥಿ ನಿಲಯದ ನಿಲಯ ಪಾಲಕ ಗಾದಿಲಿಂಗಪ್ಪ ಮಾತನಾಡಿ ದಲಿತರು ಹಿಂದುಳಿದವರು ಹಾಗೂ ರ?ಥಿಕವಾಗಿ ದರ?ಬಲ ಸಮುದಾಯಗಳ ಬದುಕಿನಲ್ಲಿ ಶೋಷಣೆಯನ್ನು ಕಡಿಮೆ ಮಾಡುವ ಪ್ರಯತ್ನವೂ ಆರಸು ಅವರ ಆಡಳಿತದ ಪ್ರಮುಖ ವೈಶಿಷ್ಟವಾಗಿತ್ತು.ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಗೌರವದಿಂದ ಬದುಕುವ ಹಕ್ಕಿದೆ ಎನ್ನುವ ಮಾನವೀಯ ನಿಲುವು ಅವರದ್ದಾಗಿತ್ತೆಂದು ವಿವ–ರಿಸಿದ ಅವರು ಇಂತಹ ಮಹಾನ್ ನಾಯಕನನ್ನು ಕೇವಲ ರಾಜಕಾರಣಿಯಾಗಿ ನೋಡುವುದಕ್ಕಿಂತ ಸಾಮಾಜಿಕ ಪರಿರ?ತನೆಯ ಹರಿಕಾರರಾಗಿ ನೋಡುವು ಸೂಕ್ತವೆಂದು ಅಭಿಪ್ರಾಯ ಪಟ್ಟರು. ಕಾರ?ಯಕ್ರಮದಲ್ಲಿ ಶಿರಸ್ತೆದಾರ ಎಸ್.ಕೆ.ರಮೇಶ್, ಸಮಾಜ ಕಲ್ಯಾಣ ಇಲಾಖೆಯ ವಿರೂಪಾಕ್ಷಪ್ಪ, ಕಂದಾಯ, ಪುರಸಭೆ, ತಾ.ಪಂ. ಆರೋಗ್ಯ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಭಾಗವಹಿಸಿದ್ದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101